# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 96 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 30–10–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 96 | RNI No: KARKAN/2023/88462 | Chitradurga | Date: 30-10-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಮನೆಯಲ್ಲಿಯೇ ಆಯುರ್ವೇದ ಪದ್ಧತಿಗಳನ್ನು ರೂಢಿಸಿಕೊಳ್ಳುವುದು ಒಳಿತು: ಕುಮಾರಸ್ವಾಮಿ 2
ಈ ಭಾರಿ ಉಪ ಚುನಾವಣೆ: ಕಾಂಗ್ರೆಸ್ ವಿರುದ್ಧ ಮಾದಿಗರು ಮತ ಹಾಕಿ 3
ಇಂದು ಚನ್ನೈನಲ್ಲಿ ನಡೆಯಲಿರುವ ಕಬ್ಬಡಿ ತಂಡದಲ್ಲಿ ಹೊಸದುರ್ಗದ ಕ್ರೀಡಾಪಟುಗಳು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನ.6ರಂದು ವಿಭಾಗೀಯ ಡಾಕ್ ಅದಾಲತ್

» ಚಿತ್ರದುರ್ಗ

ಚಿತ್ರದುರ್ಗ ಅಂಚೆ ವಿಭಾಗೀಯ ಡಾಕ್ ಅದಾಲತನ್ನು ಇದೇ ನವೆಂಬರ್ 6 ರಂದು ಸಂಜೆ 4 ಗಂಟೆಗೆ ಚಿತ್ರದುರ್ಗ ನಗರದ ಕೋಟೆ ರಸ್ತೆಯ ಕಾಮನಬಾವಿ ಬಡಾವಣೆಯಲ್ಲಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಆಯೋಜಿಸಲಾಗಿದೆ. ಸಾರ್ವಜನಿಕರು ಹಾಗೂ ಗ್ರಾಹಕರು ಅಂಚೆ ಇಲಾಖೆ ಸೇವೆಗಳಿಗೆ ಸಂಬಂಧಿಸಿದ ದೂರು ಮತ್ತು ಸಲಹೆಗಳನ್ನು ಸಲ್ಲಿಸುವಂತೆ ಚಿತ್ರದುರ್ಗ ವಿಭಾಗದ ಅಂಚೆ ಅಧೀಕ್ಷಕಿ ಕೆ.ಆರ್.ಉಷಾ ತಿಳಿಸಿದ್ದಾರೆ.

### ಕಿಶೋರಕಾರ್ಮಿಕ ಮಕ್ಕಳಿಗೆ ಕಿಟ್ ವಿತರಣೆ

» ದಾವಣಗೆರೆ

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಕಾರ್ಮಿಕ ಇಲಾಖೆಯಿಂದ ಅಕ್ಟೋಬರ್ 25 ರಂದು ನಗರದ ವಿವಿಧ ಕಡೆ ನಡೆಸಿದ ಅನಿರೀಕ್ಷಿತ ದಾಳಿಯಲ್ಲಿ ಪತ್ತೆಯಾದ 4 ಜನ ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳಿಗೆ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಹಾಗೂ ಕಾರ್ಮಿಕ ಇಲಾಖೆ ಸಹಾಯಕ ಕಾರ್ಮಿಕ ಆಯುಕ್ತರಾದ ಡಾ.ಅವಿನಾಶ್‌ನಾಯ್ಕ ಇವರು ಎಸ್.ಸಿ.ಎಸ್.ಪಿ–ಟಿ.ಎಸ್.ಪಿ ಯೋಜನೆಯಡಿ ಫಲಾನುಭವಿಗಳಿಗೆ ಆಹಾರಧಾನ್ಯ, ಶೈಕ್ಷಣಿಕ ಸಾಮಗ್ರಿಗಳು, ಸಮವಸ್ತ್ರ ಹಾಗೂ ಇನ್ನಿತರೆ ಸಾಮಗ್ರಿಗಳ ಕಿಟ್‌ಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ಆರ್.ನಾಗೇಶ್ ಹಾಗೂ ಯೋಜನಾ ನಿರ್ದೇಶಕರು ಪ್ರಸನ್ನ.ಇ.ಎನ್ ಉಪಸ್ಥಿತರಿದ್ದರು.

### ವಾರ್ಷಿಕ ಮಹಾಸಭೆ

» ದಾವಣಗೆರೆ

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ವಾರ್ಷಿಕ ಮಹಾಸಭೆಯನ್ನು ನವೆಂಬರ್ 26 ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಇವರ ಅಧ್ಯಕ್ಷತೆಯಲ್ಲಿ ನಗರದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ದೇವರಾಜ ಅರಸ್ ಬಡಾವಣೆ, ಎ. ಬ್ಲಾಕ್ ಇಲ್ಲಿ ಆಯೋಜಿಸಲಾಗಿದೆ.

### 30ರಂದು ಜಿಲ್ಲಾಮಟ್ಟದ ಭ್ರಷ್ಟಾಚಾರದ ವಿರುದ್ಧದ ಜಾಗೃತಿ ಅರಿವು ಸಪ್ತಾಹ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ವತಿಯಿಂದ ಇದೇ ಅ.30ರಂದು ಬೆಳಿಗ್ಗೆ ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ "ಜಿಲ್ಲಾಮಟ್ಟದ ಭ್ರಷ್ಟಾಚಾರದ ವಿರುದ್ಧದ ಜಾಗೃತಿ ಅರಿವು ಸಪ್ತಾಹ–2024 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಭಾಗವಹಿಸುವರು. ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಇಂದು ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನ

» ಚಿತ್ರದುರ್ಗ

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನದ ಜಾಥಾ ಕಾರ್ಯಕ್ರಮವನ್ನು ಇದೇ ಅ.30ರಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಾಥಾ ಕಾರ್ಯಕ್ರಮವು ಜಿಲ್ಲಾ ಆಸ್ಪತ್ರೆ ಆವರಣದಿಂದ ಹೊರಟು ಡೆಂಟಲ್ ಕಾಲೇಜಿನವರೆಗೆ ಹೋಗಿ ಮದಕರಿ ವೃತ್ತದಲ್ಲಿ ಕೊನೆಗೊಳ್ಳುವುದು ಎಂದು ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳು ತಿಳಿಸಿದ್ದಾರೆ.

ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ

# ಕರಡು ಮತದಾರರ ಪಟ್ಟಿ ಪ್ರಕಟ: ಹಕ್ಕು, ಆಕ್ಷೇಪಣೆ ಸಲ್ಲಿಕೆಗೆ ನ.28 ಕೊನೆಯ ದಿನ

» ಚಿತ್ರದುರ್ಗ



ಭಾರತ ಚುನಾವಣಾ ಆಯೋಗದ ಸೂಚನೆಯಂತೆ ಜಿಲ್ಲೆಯ ವಿಧಾನಸಭಾ ಕ್ಷೇತ್ರವಾರು ಕರಡು ಮತದಾರರ ಪಟ್ಟಿಯನ್ನು ಮಂಗಳವಾರದಂದು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ತಮ್ಮ ಕಚೇರಿ ಸಭಾಂಗಣದಲ್ಲಿ ಪ್ರಕಟಿಸಿದರು.

ಕರಡು ಮತದಾರರ ಪಟ್ಟಿ ಪ್ರಕಟ ಸಂಬಂಧ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆಸಿದ ಸಭೆಯಲ್ಲಿ ಕರಡು ಮತದಾರರ ಪಟ್ಟಿ ಪ್ರಕಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಚುನಾವಣಾ ಆಯೋಗದ ನಿರ್ದೇಶನದಂತೆ ಮಂಗಳವಾರದಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಇದೀಗ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ–2025 ಕಾರ್ಯವೂ ಕೂಡ ಪ್ರಾರಂಭವಾಗಿದ್ದು, ಸಾರ್ವಜನಿಕರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಇದೇ ಅ.29 ರಿಂದ ನವೆಂಬರ್ 28 ರವರೆಗೆ ಸಲ್ಲಿಸಬಹುದಾಗಿದೆ ಎಂದು ಹೇಳಿದರು.

ಮತದಾರರ ನೊಂದಣಿಗೆ ಸಂಬಂಧಿಸಿದಂತೆ 2024ರ ನವೆಂಬರ್ 9ರಂದು ಶನಿವಾರ, ನ.10ರಂದು ಭಾನುವಾರ, ನವೆಂಬರ್ 23ರಂದು ಶನಿವಾರ ಮತ್ತು ನ.24 ರಂದು ಭಾನುವಾರ ಜಿಲ್ಲೆಯಲ್ಲಿ ವಿಶೇಷ ನೋಂದಣಿ ಕಾರ್ಯಾಚರಣೆ ಹಮ್ಮಿಕೊಂಡು, ಅರ್ಹರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು. 2024ರ ಡಿಸೆಂಬರ್ 24 ರಂದು ಹಕ್ಕು ಮತ್ತು ಆಕ್ಷೇಪಣೆಗಳನ್ನು ತಿರ್ಮಾನಿಸಲಾಗುವುದು. 2025ರ ಜನವರಿ 06ರಂದು ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆ ಮಾಡಲಾಗುವುದು ಎಂದು ತಿಳಿಸಿದರು.

ಸದ್ಯ ಜಿಲ್ಲೆಯಲ್ಲಿ ಒಟ್ಟು 1661 ಮತಗಟ್ಟೆಗಳಿದ್ದು, ಒಟ್ಟು 14,35,994 ಮತದಾರರಿದ್ದಾರೆ. ಮತದಾರರ ಪಟ್ಟಿಗೆ ಹೊಸದಾಗಿ ಸೇರ್ಪಡೆಗೊಳಿಸಲು ಅರ್ಹರಿರುವ ಎಲ್ಲರನ್ನೂ ಸೇರಿಸಲು, ವಿವಿಧ ರಾಜಕೀಯ ಪಕ್ಷಗಳು ಕೂಡ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ ಕುರಿತು ವ್ಯಾಪಕ ಪ್ರಚಾರ ನೀಡಬೇಕು. ರಾಜಕೀಯ ಪಕ್ಷದವರು ಪ್ರತಿಯೊಂದು ಮತಗಟ್ಟೆಗೂ ಮತಗಟ್ಟೆ ಮಟ್ಟದ ಏಜೆಂಟರನ್ನು ನೇಮಕ ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಭಾರತ ಚುನಾವಣಾ ಆಯೋಗವು ಪ್ರಜಾಪ್ರತಿನಿಧಿ ಕಾಯ್ದೆ 1950ರ ಸೆಕ್ಷನ್ 14ಕ್ಕೆ ತಿದ್ದುಪಡಿ ಮಾಡಿ ಮತದಾರರ ನೊಂದಣಿ ನಿಯಮಗಳು 1960ಕ್ಕೆ ಅನುಗುಣವಾಗಿ ಮತದಾರರ ಪಟ್ಟಿಗೆ ಹೆಸರುಗಳನ್ನು ಸೇರ್ಪಡೆ ಮಾಡಲು ನಾಲ್ಕು ಅರ್ಹತಾ ದಿನಾಂಕಗಳನ್ನು ನೀಡಿ ಅವಕಾಶ ಕಲ್ಪಿಸಿದ್ದು, ಅದರಂತೆ 1ನೇ ಜನವರಿ, 1ನೇ ಏಪ್ರಿಲ್, 1ನೇ ಜುಲೈ, 1ನೇ ಅಕ್ಟೋಬರ್ ಆಗಿರುತ್ತದೆ. 2025ರ ಜನವರಿ 01, ಏಪ್ರಿಲ್ 01, ಜುಲೈ 01, ಅ.01ಕ್ಕೆ 18 ವರ್ಷ ಪೂರ್ಣಗೊಳ್ಳುವವರು ಹಾಗೂ ಅರ್ಹ ಮತದಾರರು ಸಂಬಂಧಿಸಿದ ಮತದಾರರ ಪಟ್ಟಿಯಲ್ಲಿ ಮಾಹಿತಿಯನ್ನು ತಿದ್ದುಪಡಿ ಮಾಡಿಸಬೇಕಾದಲ್ಲಿ ಮತ್ತು ಅದೇ ವಿಧಾನಸಭಾ ಕ್ಷೇತ್ರದ ಬೇರೆ ಮತಗಟ್ಟೆಗೆ ವರ್ಗಾಯಿಸಬೇಕಾಗಿದ್ದಲ್ಲಿ ನಿಗಧಿಪಡಿಸಿರುವ ನಮೂನೆಗಳಲ್ಲಿ 2024ರ ಅ.29 ರಿಂದ ನ.28 ರೊಳಗೆ ಅರ್ಜಿಗಳನ್ನು ಭರ್ತಿ ಮಾಡಿ ತಮ್ಮ ವ್ಯಾಪ್ತಿಯ ಮತದಾನ ಕೇಂದ್ರದಲ್ಲಿ, ತಾಲ್ಲೂಕು ಕಚೇರಿಯಲ್ಲಿ, ಉಪವಿಭಾಗಾಧಿಕಾರಿಗಳ ಕಾರ್ಯಾಲದಯಲ್ಲಿ ನೀಡಿ ಸ್ವೀಕೃತಿ ಪಡೆಯಬಹುದಾಗಿದೆ ಎಂದರು.

ಕರಡು ಮತದಾರರ ಪಟ್ಟಿಯನ್ನು ಮತಗಟ್ಟೆ ಕೇಂದ್ರ, ಗ್ರಾಮ ಪಂಚಾಯಿತಿ ಕಚೇರಿ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿ, ತಾಲ್ಲೂಕು ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ ಹಾಗೂ www.ceokarnataka.kar.nic.in, https://chitradurga.nic.in ವೆಬ್‌ಸೈಟ್‌ನಲ್ಲಿಯೂ ಸಹ ಪರಿಶೀಲಿಸಿಕೊಂಡು ಪಟ್ಟಿಯಲ್ಲಿ ಹೆಸರು ಇಲ್ಲದಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ ಹಾಗೂ ಅರ್ಜಿಗಳನ್ನು ಗಿಊಂ (ಗಿಂಣಜಡಿ ಹಜಟಠಿ ಖಿಟಜ) ನಲ್ಲಿಯೂ ಆನ್‌ಲೈನ್ ಮೂಲಕ ಸಲ್ಲಿಸಬಹುದಾಗಿದೆ ಎಂದು ಹೇಳಿದರು.


ಪುಟ 2


## ಚಳ್ಳಕೆರೆ ಮಂಡಲ ವ್ಯಾಪ್ತಿಯಲ್ಲಿ ಬಿಜೆಪಿ ಪಕ್ಷಕ್ಕೆ 50ಸಾವಿರ ಸದಸ್ಯರ ನೊಂದಾವಣೆ ಗುರಿ: ಬಾಳೆಮಂಡಿ ರಾಮದಾಸ್

» ಚಳ್ಳಕೆರೆ

ಜಿಲ್ಲಾಯಾದ್ಯಂತ ಬಿಜೆಪಿ ಸದಸ್ಯತ್ವ ಅಭಿಯಾನ ನಿರೀಕ್ಷೆಗೂ ಮೀರಿ ಯಶಸ್ವಿಯಾಗುತ್ತಿದ್ದು, ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ಪಕ್ಷದ ಸದಸ್ಯತ್ವವನ್ನು ಸ್ವೀಕರಿಸುತ್ತಿದ್ದಾರೆ. ಇಂದು ಬಿಜೆಪಿ ಜನರ ನೆಚ್ಚಿನ ಪಕ್ಷವಾಗಿ ಹೊರಹೊಮ್ಮಿದೆ ಎಂದು ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ತಿಳಿಸಿದರು.


ಪುಟ 4




## ಅಕ್ರಮ ಮದ್ಯ ಸಾಗಾಟ: ಓರ್ವ ವ್ಯಕ್ತಿ ವಶ ಪ್ರಕರಣ ದಾಖಲು

**ಚಳ್ಳಕೆರೆ:** ನಗರದ ಅಜ್ಜಯ್ಯಗುಡಿ ರಸ್ತೆಯ ಖಾಸಗಿ ಶಾಲಾ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ತನ್ನ ದ್ವಿಚಕ್ರವಾಹನದಲ್ಲಿ ಅನುಮತಿ ಇಲ್ಲದೆ ಮದ್ಯವನ್ನು ಸಾಗಾಟ ಮಾಡುತ್ತಿದ್ದ ಆತನನ್ನು ವಾಹನ ಸಮೇತ ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ ಎಂದು ಅಬಕಾರಿ ನಿರೀಕ್ಷಕ ಸಿ.ನಾಗರಾಜು ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ತಮಗೆ ದೊರೆತ ಖಚಿತ ಮಾಹಿತಿ ಮೇರೆಗೆ ಉಪನಿರೀಕ್ಷಕ ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಅಬಕಾರಿ ಪೇದೆಗಳಾದ ಎನ್.ನಾಗರಾಜು, ಟಿ.ಸೋಮಶೇಖರ, ಬಿ.ಮಂಜುಳಮ್ಮ, ಸಿ.ದರ್ಶನ್‌ಕುಮಾರ್, ಸ್ಥಳಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಗೊರ್ಲಕಟ್ಟೆಯ ಎಸ್.ಮಚೆಂದ್ರಪ್ಪ(43) ತನ್ನವಾಹನದಲ್ಲಿ ಅಕ್ರಮಮದ್ಯ ಸಾಗಾಟ ಮಾಡುತ್ತಿದ್ದು, ಆತನನ್ನು ವಶಕ್ಕೆ ಪಡೆದು ಬೈಕ್ ಸೇರಿ ಸುಮಾರು 53 ಸಾವಿರಮೌಲ್ಯದ ಮದ್ಯವನ್ನು ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ ಎಂದರು.

ಪ್ರಮುಖ ಸುದ್ದಿ

# ಮಾನಸಿಕ ರೋಗಮುಕ್ತ ಸಮಾಜವನ್ನು ನಿರ್ಮಿಸಲು ಎಲ್ಲರೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು

» ಚಳ್ಳಕೆರೆ



ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಸದೃಢ ಆರೋಗ್ಯವನ್ನು ಹೊಂದಿದಲ್ಲಿ ಮಾತ್ರ ಯಾವುದೇ ರೋಗಗಳು ಅವನನ್ನು ಬಾದಿಸುವುದಿಲ್ಲ. ರೋಗಮುಕ್ತನಾದ ವ್ಯಕ್ತಿಯಿಂದ ಮಾತ್ರ ನಾವು ಯಾವುದೇ ಉತ್ತಮ ಕಾರ್ಯವನ್ನು ನಿರೀಕ್ಷಿಸಬಹುದು. ಮಾನಸಿಕ ರೋಗಕ್ಕೆ ಒಳಗಾದವರಿಗೆ ಆತ್ಮಸ್ಥೈರ್ಯ ತುಂಬುವ ಕಾರ್ಯವನ್ನು ಎಲ್ಲರೂ ಮಾಡಬೇಕಿದೆ. ರೋಗಮುಕ್ತ ಸಮಾಜ ನಿರ್ಮಾಣಕ್ಕೆ ಆರೋಗ್ಯ ಇಲಾಖೆಯೊಂದಿಗೆ ನಾವೆಲ್ಲರೂ ಕೈಜೋಡಿಬೇಕೆಂದು ಸಿವಿಲ್ ನ್ಯಾಯಾಲಯ ಹಿರಿಯ ನ್ಯಾಯಾಧೀಶ ಶಮೀರ್ ಪಿ.ನಂದ್ಯಾಲ್ ತಿಳಿಸಿದರು.

ಅವರು, ಮಂಗಳವಾರ ನ್ಯಾಯಾಲಯದ ಆವರಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ತಾಲ್ಲೂಕು ವಕೀಲರ ಸಂಘ ಮತ್ತು ತಾಲ್ಲೂಕು ಆರೋಗ್ಯ ಇಲಾಖೆಯಿಂದ ಹಮ್ಮಿಕೊಂಡಿದ್ದ ವಿಶ್ವಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸಮಾಜದ ಪ್ರತಿಯೊಬ್ಬ ವ್ಯಕ್ತಿ ತನ್ನ ಆರೋಗ್ಯ ಬಗ್ಗೆ ತಾನೇ ಗಮಹರಿಸಬೇಕಿದೆ. ವಿಶೇಷವಾಗಿ ಅನಾರೋಗ್ಯ ಪೀಡಿತನಾಗಿ ಮಾನಸಿಕ ರೋಗಿಯಾದರೆ, ಅಂತಹವರ ಬದುಕು ಡೋಲಾಯಮಾನವಾಗುತ್ತದೆ. ಆದ್ದರಿಂದ ಆರೋಗ್ಯ ಇಲಾಖೆ ಇಂತಹ ಜಾಗೃತಿ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರ ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸಿರುವುದು ಸಂತಸ ತಂದಿದೆ ಎಂದರು.

ಜಿಲ್ಲಾ ಆಸ್ಪತ್ರೆಯ ಮನೋವೈದ್ಯ ಡಾ.ಆರ್.ಮಂಜುನಾಥ ಮಾತನಾಡಿ, ಕೆಲವೊಂದು ಸಂದರ್ಭಗಳಲ್ಲಿ ಒತ್ತಡದ ಹಿನ್ನೆಲೆಯಲ್ಲಿ ಕೆಲಸ ನಿರ್ವಹಿಸುವಾಗ ನಮಗೆ ಆರೋಗ್ಯ ಸಮಸ್ಯೆ ಉಂಟಾಗುತ್ತದೆ. ನಮ್ಮ ಮೆದುಳಿಗೆ ಹೆಚ್ಚು ಒತ್ತಡ ಉಂಟಾದ ಸಂದರ್ಭದಲ್ಲಿ ನಮಗೆ ಅನಾರೋಗ್ಯ ಕಾಡಲು ಪ್ರಾರಂಭಿಸುತ್ತದೆ. ನಿಶಕ್ತಿ ಮತ್ತು ದಣಿವು ಆದಾಗ ನಾವು ಎಚ್ಚರಿಕೆಯಿಂದ ಇರಬೇಕಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಆರೋಗ್ಯ ಇಲಾಖೆಯ ಮುಂಜಾಗ್ರತಾ ಕ್ರಮದಿಂದ ಮಾನಸಿಕ ರೋಗಕ್ಕೆ ತುತ್ತಾಗುವವರಿಗೆ ಪ್ರಾರಂಭದ ಹಂತದಲ್ಲೇ ಸೂಕ್ತ ಮಾರ್ಗದರ್ಶನ, ಚಿಕಿತ್ಸೆ ನೀಡಿ ಅವರನ್ನು ಮಾನಸಿಕ ಒತ್ತಡದಿಂದ ಪಾರುಮಾಡಲಾಗುತ್ತಿದೆ. ಆದರೆ, ಇದು ನಿರಂತರ ಪ್ರಕ್ರಿಯೆ ಆರೋಗ್ಯ ಇಲಾಖೆಯ ಯಾವುದೇ ಜಾಗೃತಿ ಕಾರ್ಯಕ್ರಮಗಳುಯಶಸ್ವಿಯಾಗಲು ಎಲ್ಲರ ಸಹಕಾರ ಅತಿಮುಖ್ಯ. ಸಾರ್ವಜನಿಕರು ತಮಗೆಯಾರಾದರೂ ಮಾನಸಿಕ ಒತ್ತಡದಿಂದ ಬಳಲುವವರನ್ನು ಕಂಡರೆ ಕೂಡಲೇ ಹತ್ತಿರ ಆಸ್ಪತ್ರೆಗೆ ದಾಖಲಿಸಿ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್.ಆರ್. ಹೇಮಾ ಮಾತನಾಡಿ, ಪ್ರತಿನಿತ್ಯ ಬದುಕಿನಲ್ಲಿ ಉಂಟಾಗುವ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸುವ ಸಂದರ್ಭದಲ್ಲಿ ನಮಗೆ ಅರಿವಿಲ್ಲದಂತೆ ನಮ್ಮನ್ನು ಮಾನಸಿಕ ಒತ್ತಡ ಆವರಿಸುತ್ತದೆ. ಏನು ಮಾಡಲು ಸಾಧ್ಯವಿಲ್ಲದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಇದರಿಂದ ವ್ಯಕ್ತಿ ಚಿಂತನೆಗೆ ಒಳಗಾಗುತ್ತಾನೆ. ತುಂಬಾ ಅಸಹಾಯಕನಾಗಿ ಗೋಚರಿಸುತ್ತಾನೆ, ಒಂದು ರೀತಿ ಎಲ್ಲವನ್ನೂ ಕಳೆದುಕೊಂಡಂತೆ ಚಿಂತನೆಗೆ ಒಳಗಾಗುತ್ತಾನೆ. ಇಂತಹ ಸಂದರ್ಭದಲ್ಲಿ ಅವನನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜಾಗೃತಿ ಮೂಡಿಸಿದಲ್ಲಿ ಮಾತ್ರ ಮಾನಸಿಕತೆಯಿಂದ ದೂರವಾಗುತ್ತಾನೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಆರೋಗ್ಯ ಇಲಾಖೆ, ನ್ಯಾಯಾಂಗ ಇಲಾಖೆ ಮತ್ತು ವಕೀಲರ ಸಂಘದ ಸಹಯೋಗದಲ್ಲಿ ವಿಶ್ವಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಸಾಮಾನ್ಯವಾಗಿ ಮಾನಸಿಕತೆಯಿಂದ ನರಳುವ ವ್ಯಕ್ತಿಯಿಂದ ನಾವು ಏನನ್ನು ನಿರೀಕ್ಷಣೆ ಮಾಡಲು ಸಾಧ್ಯವಿಲ್ಲ. ಮಾನಸಿಕತೆ ಎಂಬುವುದು ನಾವೆತಂದುಕೊಳ್ಳುವಂತಹ ಕಾಯಿಲೆಯಾಗಿದೆ. ಅತಿಹೆಚ್ಚು ಚಿಂತನೆಯಿಂದ ಮಾನಸಿಕತೆ ಉಂಟಾಗುತ್ತದೆ. ಬದುಕಿನ ಪ್ರತಿಯೊಂದು ಸಂದರ್ಭದಲ್ಲೂ ಧೈರ್ಯದಿಂದ ಎಲ್ಲವನ್ನು ನಿವಾರಣೆ ಮಾಡಿದಲ್ಲಿ ಮಾತ್ರ ಮಾನಸಿಕತೆಯಿಂದ ಮುಕ್ತರಾಗಬಹುದು. ಆರೋಗ್ಯ ಇಲಾಖೆ ಇಂತಹ ಕಾರ್ಯಕ್ರಮಗಳನ್ನು ಹೆಚ್ಚು ಹಮ್ಮಿಕೊಂಡು ಜನರನ್ನು ಮಾನಸಿಕ ಕಾಯಿಲೆಯಿಂದ ಮುಕ್ತರಾಗಿಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಎನ್.ಕಾಶಿ, ವಕೀಲರ ಸಂಘ ಉಪಾಧ್ಯಕ್ಷ ಬಿ.ಪಾಲಯ್ಯ, ಪ್ರಧಾನ ಕಾರ್ಯದರ್ಶಿ ಸಿದ್ದರಾಜು, ಖಜಾಂಚಿ ಟಿ.ರುದ್ರಯ್ಯ ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### 1 ರಂದು 69 ನೇ ಕರ್ನಾಟಕ ರಾಜ್ಯೋತ್ಸವ,

» **ದಾವಣಗೆರೆ**

ಜಿಲ್ಲಾಡಳಿತದ ವತಿಯಿಂದ ನವೆಂಬರ್ 1 ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ 69 ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ. ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವದ ಸಂದೇಶ ನೀಡುವರು.ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 8 ಕ್ಕೆ ಹೈಸ್ಕೂಲ್ ಮೈದಾನದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮೆರವಣಿಗೆಗೆ ಚಾಲನೆ ನೀಡಲಾಗುವುದು. ಕಲಾ ತಂಡಗಳೊಂದಿಗೆ ಮೆರವಣಿಗೆಯು ಮಹಾನಗರಪಾಲಿಕೆ ಮುಂಭಾಗದಿಂದ ಗಾಂಧಿ ವೃತ್ತ, ಅಶೋಕ ರಸ್ತೆ, ಜಯದೇವ ವೃತ್ತ, ವಿದ್ಯಾರ್ಥಿ ಭವನದ ಮಾರ್ಗವಾಗಿ ಜಿಲ್ಲಾ ಕ್ರೀಡಾಂಗಣದ ತಲುಪಲಿದೆ.ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಕ್ಷಿಣ ವಿಧಾನಸಭಾ ಕ್ಷೇತ್ರ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಉಪಸ್ಥಿತರಿರುವರು. ನವೆಂಬರ್ 1 ರಂದು ಸಂಜೆ 6 ಗಂಟೆಗೆ ನಗರದ ಗಾಜಿನ ಮನೆಯಲ್ಲಿ ವಿವಿಧ ಶಾಲಾ, ಕಾಲೇಜಿನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

### 30 ರಂದು ದೀಪ ಸಂಜೀವಿನಿ ಕಾರ್ಯಕ್ರಮ

» **ದಾವಣಗೆರೆ**

ಜಿಲ್ಲಾ ಪಂಚಾಯತ್, ಎನ್.ಆರ್.ಎಲ್.ಎಂ ಸಂಜೀವಿನಿ–ಕೆ.ಎಸ್.ಆರ್.ಎಲ್.ಪಿ.ಎಸ್ ವತಿಯಿಂದ ಅಕ್ಟೋಬರ್ 30 ರಂದು ಬೆಳಿಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಬಿ.ಎಸ್. ಚನ್ನಬಸಪ್ಪ & ಸನ್ಸ್ (ಎಕ್ಸ್ ಕ್ಲೂಜಿವ್) ಬಟ್ಟೆ ಅಂಗಡಿ ಆವರಣ ಮತ್ತು ಕೆ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ದೀಪ ಸಂಜೀವಿನಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ದೀಪಾವಳಿ ಹಬ್ಬದ ಪ್ರಯುಕ್ತ ಗ್ರಾಮೀಣ ಭಾಗದ ಮಹಿಳಾ ಸ್ವ–ಸಹಾಯ ಸಂಘದವರು ತಯಾರಿಸಿದ ಮಣ್ಣಿನ ವಿವಿಧ ಬಗೆಯ ಹಣತೆಗಳು ಹಾಗೂ ಹಬ್ಬದ ವಿಶೇಷ ತಿಂಡಿ ತಿನಸುಗಳನ್ನು ಮಾರಾಟ ಮಾಡಲಾಗುವುದು.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ದೀಪ ಸಂಜೀವಿನಿ ಮಳಿಗೆಗಳಿಗೆ ಭೇಟಿ ನೀಡಿ ಗ್ರಾಮೀಣ ಭಾಗದಮಹಿಳೆಯರಿಗೆಪ್ರೋತ್ಸಾಹನೀಡಬೇಕೆಂದು ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಕರಡು ಮತದಾರರ ಪಟ್ಟಿ ಪ್ರಕಟ: ಹಕ್ಕು, ಆಕ್ಷೇಪಣೆ ಸಲ್ಲಿಕೆಗೆ ನ.28 ಕೊನೆ ದಿನ

» **ಮೊದಲ ಪುಟದಿಂದ**

ಮುಖ್ಯವಾಗಿ ಪ್ರತಿಯೊಬ್ಬ ಯುವಕರು ಮತದಾರರ ಪಟ್ಟಿಯಲ್ಲಿ ತಪ್ಪದೇ ತಮ್ಮ ಹೆಸರುಗಳನ್ನು ನೊಂದಾಯಿಸಿಕೊಳ್ಳಲು ಕೋರಿದೆ. ಈ ಸಂಬಂಧ ಪ್ರಾಂಶುಪಾಲರು ತಮ್ಮ ಕಾಲೇಜಿನಿಂದ ಒಬ್ಬ ಉಪಾಧ್ಯಾಯರು ಮತ್ತು ಒಬ್ಬ ವಿದ್ಯಾರ್ಥಿಯನ್ನು ನೇಮಕ ಮಾಡಿ ಎಲ್ಲಾ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಬಹುದಾಗಿದೆ. ತಾಲ್ಲೂಕು ಕಚೇರಿಯ ಸಮನ್ವಯದೊಂದಿಗೆ ಅರ್ಹ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರಿಸುವ ಬಗ್ಗೆ ಹಾಗೂ ಚುನಾವಣೆಯಲ್ಲಿ ಪಾಲ್ಗೊಳ್ಳುವ ಬಗ್ಗೆ ಜಾಗೃತಿ ಮೂಡಿಸಬಹುದಾಗಿದೆ. ಮತದಾರರ ಪಟ್ಟಿಯಲ್ಲಿ ಮತದಾರರ ಹೆಸರನ್ನು ನೊಂದಾಯಿಸಲು ಪ್ರತಿಯೊಬ್ಬ ನಾಗರೀಕರ ಹಕ್ಕಾಗಿರುತ್ತದೆ. ಈ ಸದಾವಕಾಶವನ್ನು ಪ್ರತಿಯೊಬ್ಬರು ತಪ್ಪದೆ ಉಪಯೋಗಿಸಿಕೊಳ್ಳಬೇಕು.

ಮತದಾರರ ಪಟ್ಟಿಯ ಬಗ್ಗೆ ಯಾವುದೇ ಸಂದೇಹಗಳಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಜಿಲ್ಲಾ ಸಂಪರ್ಕ ಕೇಂದ್ರದ ಸಹಾಯವಾಣಿ ಸಂಖ್ಯೆ–ಟೋಲ್ ಫ್ರೀ ಸಂಖ್ಯೆ 1950ಕ್ಕೆ ಕರೆ ಮಾಡಬಹುದಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಸಿಪಿಐ (ಎಂ) ಡಿಒಸಿ ಸಿ.ಕೆ.ಗೌಸ್‌ಪೀರ್, ಜಿಲ್ಲಾ ಜೆಡಿಎಸ್ ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ಬಿಜೆಪಿ ಜಿಲ್ಲಾ ಕಾರ್ಯಕಾರಣಿ ಸದಸ್ಯ ಟಿ.ಯಶವಂತ ಕುಮಾರ್ ಸೇರಿದಂತೆ ಚುನಾವಣೆ ಶಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಮನೆಯಲ್ಲಿಯೇ ಆಯುರ್ವೇದ ಪದ್ಧತಿಗಳನ್ನು ರೂಢಿಸಿಕೊಳ್ಳುವುದು ಒಳಿತು: ಕುಮಾರಸ್ವಾಮಿ

» **ಚಿತ್ರದುರ್ಗ**

ಜಗತ್ತಿನವೈದ್ಯಪದ್ಧತಿಗೆಆಯುರ್ವೇದವನ್ನು ನೀಡಿದ ಕೀರ್ತಿ ಭಾರತ ದೇಶಕ್ಕೆ ಸಲ್ಲುತ್ತದೆ. ಪ್ರತಿಯೊಂದು ಮನೆಯಲ್ಲೂ ಔಷಧೀಯ ಸಸ್ಯ ಹಾಗೂ ಗಿಡ ಮೂಲಿಕೆಗಳನ್ನು ಬೆಳೆಸುವುದರ ಜೊತೆಗೆ, ಆಯುರ್ವೇದ ಪದ್ಧತಿಗಳನ್ನು ರೂಢಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆಯುಷ್ ಇಲಾಖೆ ಹಾಗೂ ನಗರ ಸಭೆ ಸಹಯೋಗದಲ್ಲಿ, ಮಂಗಳವಾರ ನಗರ ಸಭೆಯ ಸಭಾಂಗಣದಲ್ಲಿ, ಧನ್ವಂತರಿ ಜಯಂತಿ ಅಂಗವಾಗಿ ಆಯೋಜಿಸಲಾದ 9ನೇ ಆಯುರ್ವೇದ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ತನ್ನದೇ ಆದ ಭವ್ಯ ಇತಿಹಾಸ, ಪರಂಪರೆಹೊಂದಿದದೇಶ.ಎಲ್ಲಾಕ್ಷೇತ್ರಗಳಲ್ಲಿ ಅದರಲ್ಲೂ ವಿಜ್ಞಾನ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಚರಕ, ಧನ್ವಂತರಿ ಶುಶ್ರೂಷೆಯ ಪರಂಪರೆಯನ್ನು ಜಗತ್ತಿಗೆ ಸಾರಿದೆ. ಈ ಹಿಂದೆ ಆಧುನೀಕರಣ, ನಗರೀಕರಣ ಇನ್ನಿತರೆ ಆವಿಷ್ಕಾರಗಳು ಇಲ್ಲದೇ ಹಿರಿಯರ ಸ್ಪರ್ಶ, ವಾತ್ಸಲ್ಯ ಮನೋಭಾವ, ಪ್ರಾಥಮಿಕ ಚಿಕಿತ್ಸೆಗಳಿಂದ ಅದೆಷ್ಟೋ ಕಾಯಿಲೆಗಳನ್ನು ಗುಣಪಡಿಸುತ್ತಿದ್ದರು. ನಮ್ಮ ಆಹಾರ ಪದ್ಧತಿ, ಸಂಸ್ಕಾರ, ಸಂಸ್ಕೃತಿ, ಹವ್ಯಾಸ, ಅಭ್ಯಾಸಗಳೆಲ್ಲವೂ ಆರೋಗ್ಯಕ್ಕೆ ಪೂರಕವಾಗಿದ್ದವು. ಆದರೆ ಇಂದು ಅವೆಲ್ಲವೂಬದಲಾಗಿಆರೋಗ್ಯಕ್ಕೆಸಂಚಕಾರ ತರುತ್ತಿವೆ. ಆದ್ದರಿಂದ ಉತ್ತಮವಾದ ಹವ್ಯಾಸಗಳನ್ನು ರೂಢಿಸಿಕೊಳ್ಳುವುದರಿಂದ ಆರೋಗ್ಯವಾಗಿರಬಹುದು. ಆಯುಷ್ ಲೋಕದ ದೈವ ಧನ್ವಂತರಿಯವರು ಹಾಕಿ ಕೊಟ್ಟಂತಹ ಆಯುರ್ವೇದ ವಿಧಾನ, ಗುಣಗಳ ಜೊತೆಗೆ ಯೋಗವನ್ನು ಪಾಲನೆ ಮಾಡುವುದರಿಂದ ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾಗಬಹುದು. ಪ್ರತಿಯೊಬ್ಬರು ತಮ್ಮ ಮನೆಯ ಸುತ್ತ ಮುತ್ತ ಔಷಧೀಯ ಗುಣವುಳ್ಳ ಸಸ್ಯಗಳನ್ನು ಬೆಳೆಸಿ, ಸೇವಿಸುವುದರ ಮೂಲಕ ಉತ್ತಮವಾದ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಇಂದು ಆಯುರ್ವೇದದ ಕಡೆ ಇಡೀ ಜಗತ್ತೇ ತಿರುಗಿ ನೋಡುತ್ತಿದೆ. ಆಯುರ್ವೇದ ಜೊತೆಗೆ ಯೋಗ ಹವ್ಯಾಸಗಳನ್ನು ನಾವು ಮತ್ತು ನಮ್ಮ ಮಕ್ಕಳು ರೂಡಿಸಿಕೊಳ್ಳುವ ಮೂಲಕ ನಿರಂತರವಾಗಿ ಮುಂದಿನ ಪೀಳಿಗೆಗೆ ಕೊಂಡುಯ್ಯುವ ಕೆಲಸ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಅಮೃತ ಆಯುರ್ವೇದಿಕ್ ಕಾಲೇಜ್ ಪ್ರಾಂಶುಪಾಲ ಡಾ.ಪ್ರಶಾಂತ್ ಮಾತನಾಡಿ, ದೇಶದ ಪರಂಪರೆ ಸಂಸ್ಕೃತಿ, ಸಂಸ್ಕಾರ, ಆಹಾರ, ಹಳ್ಳಿಯ ಸೊಗಡು ಹಾಗೊ ನಮ್ಮ ತನವನ್ನು ನಾವು ಮರೆತು ಪಾಶ್ಚಿಮಾತ್ಯ ದೇಶಗಳೆಡೆಗೆ ಮಾರು ಹೋಗುತ್ತಿದ್ದೇವೆ. ಪ್ರಸ್ತುತ ಆಯುರ್ವೇದ ಪಾಲನೆಯಾಗುತ್ತಿದೆ ಎಂದರೆ ಅದೂ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ. ಫಾಸ್ಟ್ ಫುಡ್‌ನಂತಹ ತಿನಿಸುಗಳನ್ನು ಸೇವಿಸುವ ಮೂಲಕ ಅನೇಕ ರೀತಿಯ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಆಯುರ್ವೇದವನ್ನು ಬಳಸುವ ಮೂಲಕ ಆಯುರ್ವೇದ ಉಳಿಸೋಣ ಎಂದರು.

ನಗರದ ರಸ್ತೆಗೆ ಧನ್ವಂತರಿ ಹೆಸರು ನಾಮಕರಣ : ನಗರ ಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ಜೋಗಿಮಟ್ಟಿ ರಸ್ತೆಯ ಟೀಚರ್ಸ್ ಕಾಲೋನಿಯ ದ್ವಿಪಥ ರಸ್ತೆಗೆ ದೇವವೈದ್ಯ ಧನ್ವಂತರಿಯ ಹೆಸರು ಇಡುವುದಾಗಿ ನಗರ ಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ ಕಾರ್ಯಕ್ರಮದಲ್ಲಿ ಹೇಳಿದರು.

ಉಚಿತ ಆರೋಗ್ಯ ತಪಾಸಣೆ ಶಿಬಿರ : ಆಯುರ್ವೇದ ದಿನಾಚರಣೆ ಅಂಗವಾಗಿ ನಗರ ಸಭೆಯ ಪೌರ ಕಾರ್ಮಿಕರು ಹಾಗೂ ಅವರ ಕುಟುಂಬದವರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು. ಆಯುರ್ವೇದ ಇಲಾಖೆಯ ಕರಪತ್ರಗಳನ್ನು ಈ ಸಂದರ್ಭದಲ್ಲಿ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧಕ್ಷ ತಾಜ್‌ಪೀರ್, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ನಗರ ಸಭೆ ಆಯುಕ್ತೆ ಎಂ.ರೇಣುಕಾ, ನಗರ ಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಸ್ಥಾಯಿ ಸಮಿತಿ ಅಧ್ಯಕ್ಷ ನಸರುಲ್ಲಾ ಸೇರಿದಂತೆ ಆಯುಷ್ಯ ವೈದ್ಯಾಧಿಕಾರಿಗಳು, ನಗರ ಸಭೆ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಸೋಮಾರಿ ಜೀವನಶೈಲಿ ಬಿಡಿ, ಪಾರ್ಶ್ವವಾಯುವಿನಿಂದ ರಕ್ಷಣೆ ಪಡೆಯಿರಿ: ಜಿಲ್ಲಾ ಶಸ್ತ್ರ ಚಿಕಿತ್ಸ ಡಾ.ರವೀಂದ್ರ

» **ಚಿತ್ರದುರ್ಗ**

ಸೋಮಾರಿ ಜೀವನಶೈಲಿ ಬಿಟ್ಟು, ಪಾರ್ಶ್ವವಾಯುವಿನಿಂದ ರಕ್ಷಣೆ ಪಡೆಯಿರಿ ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಎ.ರವೀಂದ್ರ ಹೇಳಿದರು.

ನಗರದ ಕೋಟೆ ಮುಂಭಾಗದ ಮದರ್ ತೆರೇಸಾ ಸ್ಕೂಲ್ ಆಫ್ ನರ್ಸಿಂಗ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಆಸ್ಪತ್ರೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಸಹಯೋಗದೊಂದಿಗೆ ವಿಶ್ವ ಸ್ಟ್ರೋಕ್ ದಿನ–2024 ಮಾನಸಿಕ ಆರೋಗ್ಯದ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಪಾರ್ಶ್ವವಾಯುಗೆ ಅನಾರೋಗ್ಯಕರ ಆಹಾರ ಪದ್ಧತಿ, ಮದ್ಯಪಾನ, ಧೂಮಪಾನ, ಬೊಜ್ಜು ಮುಖ್ಯ ಕಾರಣಗಳಾಗಿವೆ. ಸಾರ್ವಜನಿಕರು, ಆರೋಗ್ಯ ಕಾರ್ಯಕರ್ತರು, ನರ್ಸಿಂಗ್ ವಿದ್ಯಾರ್ಥಿಗಳು ಪ್ರಾರಂಭಿಕ ಲಕ್ಷಣಗಳನ್ನು ಗುರುತಿಸಿ, ನಾಲ್ಕರಿಂದ ಐದು ಗಂಟೆಯ ಒಳಗೆ ಜಿಲ್ಲಾ ಆಸ್ಪತ್ರೆಯ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ವಿಭಾಗಕ್ಕೆ ಕರೆತಂದರೆ ಚಿಕಿತ್ಸೆ ಆರೈಕೆ ನೀಡಲಾಗುತ್ತದೆ. ಈ ಸಮಯವನ್ನ ಗೋಲ್ಡನ್ ಅವರ್ ಎಂದು ಕರೆಯುತ್ತೇವೆ ಎಂದು ತಿಳಿಸಿದ ಅವರು, ಇದರಿಂದ ಸಂಪೂರ್ಣ ಗುಣಮುಖರಾಗಬಹುದು ಎಂದರು.

ಬಸವೇಶ್ವರ ವೈದ್ಯಕೀಯ ಕಾಲೇಜು ಆಸ್ಪತ್ರೆ ನರರೋಗ ತಜ್ಞ ಕಿರಣ್ ಗೌಡ ಮಾತನಾಡಿ, ಪಾರ್ಶ್ವವಾಯು ಅಥವಾ ಮೆದುಳಿನ ಆಘಾತ ಮೆದುಳಿನ ಭಾಗಕ್ಕೆ ಕಡಿಮೆ ಆಮ್ಲಜನಕ ಪೂರೈಕೆಯಿಂದಾಗಿ ಉಂಟಾಗುವ ಸ್ಥಿತಿ ಸಮತೋಲನ ಅಥವಾ ಸಮನ್ವಯದ ನಷ್ಟ ಒಂದು ಅಥವಾ ಎರಡು ಕಣ್ಣುಗಳ ದೃಷ್ಟಿ ನಷ್ಟ ಮುಖದ ಒಂದು ಬದಿಯಲ್ಲಿ ದೌರ್ಬಲ್ಯ ಕೈ ಅಥವಾ ಕಾಲಿನ ದೌರ್ಬಲ್ಯ ಅಥವಾ ಮರಗಟ್ಟುವಿಕೆಯ ಸ್ಪಷ್ಟಮಾತು ಅಥವಾ ಮಾತನಾಡಲು ತೊಂದರೆ ಈ ಲಕ್ಷಣಗಳು ಕಂಡುಬಂದಲ್ಲಿ ಕೂಡಲೇ ರೋಗಿಯನ್ನ ನಾಲ್ಕರಿಂದ ಐದು ಗಂಟೆಯ ಒಳಗೆ ಆಸ್ಪತ್ರೆಗೆ ಕರೆತನ್ನಿ. ಚಿಕಿತ್ಸೆ ನೀಡಿ ಮುಂದೆ ಉಂಟಾಗುವಂತಹ ಅನಾಹುತ ತಪ್ಪಿಸಬಹುದು ಎಂದರು. ಜಿಲ್ಲಾ ಮಾನಸಿಕ ರೋಗಗಳ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ ನಾಗರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಮದರ್ ತೆರೆಸಾ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ಮಂಜುಳಾ, ಪಿಡಿಓ ಸುಷ್ಮಾರಾಣಿ, ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಬಿ ಜಾನಕಿ ಸೇರಿದಂತೆ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು, ಮತ್ತಿತರರು ಇದ್ದರು.

## ವಿಶೇಷಚೇತನರ ವಿವಾಹ: ಪ್ರೋತ್ಸಾಹ ಧನ ವಿತರಣೆ



» **ಚಿತ್ರದುರ್ಗ**

ತಾಲ್ಲೂಕಿನ ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಜ್ಜನಕೆರೆ ಗ್ರಾಮದ ವಿಶೇಷಚೇತನರಾದ ಕೀರ್ತನಾ ಹಾಗೂ ಅವರನ್ನು ವಿವಾಹವಾದ ನರಸಿಂಹ ಮೂರ್ತಿ ದಂಪತಿಗಳಿಗೆ ಹೂಡಿಕೆ ಮಾಡಿರುವ ರೂ.50,000/– ಪ್ರೋತ್ಸಾಹ ಧನದ ಬಾಂಡ್ ಅನ್ನು ಮಂಗಳವಾರ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ತಾ.ಪಂ ಇಒ ರವಿಕುಮಾರ್ ವಿತರಿಸಿದರು.

ವಿಶೇಷಚೇತನ ಯುವಕ, ಯುವತಿಯರನ್ನು ಸಾಮಾನ್ಯ ವ್ಯಕ್ತಿಗಳು ವಿವಾಹವಾಗುವ ಬಗ್ಗೆ ನಿರ್ಲಕ್ಷತೆ ತೋರಬಾರದು ಹಾಗೆ ಇದರಿಂದ ವಿಶೇಷಚೇತನರು ವೈವಾಹಿಕ ಜೀವನದಿಂದ ವಂಚಿತರಾಗದೆ ಸಾಮಾನ್ಯರಂತೆ ವೈವಾಹಿಕ ಜೀವನ ಸಾಗಿಸಬೇಕು. ಹಾಗಾಗಿ ವಿಶೇಷಚೇತನ ಯುವಕ–ಯುವತಿಯರನ್ನು ಸಾಮಾನ್ಯ ವ್ಯಕ್ತಿಗಳು ಮದುವೆಯಾಗುವುದಕ್ಕೆ ಪ್ರೋತ್ಸಾಹ ನೀಡುವುದರಿಂದ ಹೆಚ್ಚು ಹೆಚ್ಚು ಸಾಮಾನ್ಯ ವ್ಯಕ್ತಿಗಳು ವಿಕಲಚೇತನ ವ್ಯಕ್ತಿಗಳನ್ನು ವಿವಾಹವಾಗಲು ಮುಂದೆ ಬಂದು ವಿಕಲಚೇತನರ ವೈವಾಹಿಕ ಜೀವನ ಸುಗುಮವಾಗಿ ನಡೆಸಲು ಅನುಕೂಲವಾಗುತ್ತದೆ ಎಂದು ಸರ್ಕಾರವು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಭಲೀಕರಣ ಇಲಾಖೆಯ ಮೂಲಕ ವಿವಾಹವಾಗುವ ಸಾಮಾನ್ಯ ಯುವಕ/ಯುವತಿಯರಿಗೆ ನಿರಂತರವಾಗಿ ಮಾಸಿಕ ಒಂದಷ್ಟು ಸಹಾಯ ದೊರಕಿಸಲು ವಿಕಲಚೇತನರ ವ್ಯಕ್ತಿಯ ಹೆಸರಿನಲ್ಲಿ ರೂ.50,000/– ಗಳನ್ನು ಹೂಡಿಕೆಯ ರೂಪದಲ್ಲಿ ಪ್ರೋತ್ಸಾಹ ನೀಡಲು ಹಾಗೂ ಅದರಿಂದ ಬರುವ ಬಡ್ಡಿ ಹಣವನ್ನು ಭತ್ಯೆಯಾಗಿ ಮದುವೆಯಾದ ಸಾಮಾನ್ಯ ವ್ಯಕ್ತಿ ಪಡೆಯಲು ಅನುವಾಗುವಂತೆ ಯೋಜನೆ ಅನುಷ್ಠಾನಗೊಳಿಸಿದೆ. ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ರಾಘವೇಂದ್ರ, ತಾ.ಪಂ ವ್ಯವಸ್ಥಾಪಕ ಇರ್ಫಾನ್ ಹಾಗೂ ಎಂಆರ್‌ಡಬ್ಲ್ಯೂ ಮೈಲಾರಪ್ಪ ಇದ್ದರು.

## ಯಾವ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಯಾವ ರೈತರನ್ನೂ ತಮ್ಮ ಜಮೀನುಗಳಿಂದ ಒಕ್ಕಲೆಬ್ಬಿಸುವುದಿಲ್ಲ ಹಾಗೂ ರೈತರಿಗೆ ನೋಟಿಸ್ ನೀಡಲಾಗಿದ್ದರೆ, ಅದನ್ನು ವಾಪಸ್ಸು ಪಡೆಯಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ರಾಜ್ಯದ ವಿಜಯಪುರ,ಯಾದಗಿರಿ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ವಕ್ಫ್ ಆಸ್ತಿ ಎಂದು ರೈತರಿಗೆ ನೋಟಿಸ್ ನೀಡಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಅವರು ಪ್ರತಿಕ್ರಿಯೆ ನೀಡಿದರು. ಕಂದಾಯಸಚಿವ ಕೃಷ್ಣಬೈರೇಗೌಡ, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್, ವಕ್ಫ್ ಸಚಿವ ಜಮೀರ್ ಅಹ್ಮದ್ ಅವರು ನಿನ್ನೆ ಜಂಟಿ ಪತ್ರಿಕಾಗೋಷ್ಠಿಯನ್ನು ನಡೆಸಿ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ ಎಂದು ತಿಳಿಸಿದರು.

ನಿನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಜಾರಿಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಈ ನಿಟ್ಟಿನಲ್ಲಿ ಹೈಕೋರ್ಟ್ ನ ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಏಕ ಸದಸ್ಯ ಆಯೋಗ ರಚಿಸಲು ತೀರ್ಮಾನಿಸಲಾಗಿದ್ದು, ಒಳಮೀಸಲಾತಿ ಜಾರಿ ಬಗ್ಗೆ ಪರಾಮರ್ಶೆ ನಡೆಸಿ ವರದಿ ನೀಡಲು ಮೂರು ತಿಂಗಳ ಅವಧಿ ನೀಡಲಾಗುವುದು ಎಂದರು.

**ಪ್ರಮುಖ ಸುದ್ದಿ**

# ಆಯುರ್ವೇದ ಚಿಕಿತ್ಸಾ ಪದ್ಧತಿಯಿಂದ ದೀರ್ಘಾಯುಷ್ಯ

» **ದಾವಣಗೆರೆ**

ಆಯುರ್ವೇದ ಚಿಕಿತ್ಸಾ ಪದ್ಧತಿ ಅಳವಡಿಕೆಯಿಂದ ದೀರ್ಘಾಯುಷ್ಯ ಸಾಧ್ಯ ಎಂದು ಎಂದು ವಿರಕ್ತಮಠದ ಡಾ; ಬಸವಪ್ರಭು ತಿಳಿಸಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಸರ್ಕಾರಿ ಆಯುಷ್ ವೈದ್ಯಾಧಿಕಾರಿಗಳ ಸಂಘ ಸೇರಿದಂತೆ ವಿವಿಧ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರಸದ್ಯೋಜಾತಹಿರೇಮಠದಲ್ಲಿ ಧನ್ವಂತರಿ ಜಯಂತಿಯ ಅಂಗವಾಗಿ ಹಮ್ಮಿಕೊಂಡಿದ್ದ 9 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯಲ್ಲಿ ಸಾನಿಧ್ಯ ವಹಿಸಿ ಮಾತನಾಡಿದರು.ಆಯುರ್ವೇದ ಎಂದರೆ ಅಯುಷ್ಯದ ಜ್ಞಾನ ಎಂದು ಅರ್ಥ, ಈ ಪದ್ಧತಿ ಅನುಸರಿಸುವವರು ದೀರ್ಘಾಯುಷ್ಯಿಗಳಾಗುತ್ತಾರೆ. ನಮ್ಮ ಪೂರ್ವಜರು ಆಯುರ್ವೇದ ಪದ್ಧತಿ ಅನುಸರಿದ ಹಿನ್ನೆಲೆಯಲ್ಲಿ ಶತಾಯುಷಿಗಳಾಗಿ ಬುದಕಿದ್ದರು. ಇಂದಿನ ಪೀಳಿಗೆ ಕೂಡ ನೂರು ವರ್ಷ ಬದುಕಬೇಕಾದರೆ, ಆಯುರ್ವೇದ ಪದ್ಧತಿಗೆ ಒಳಗಾಗಬೇಕು ಎಂದು ಕರೆ ನೀಡಿದರು.

ನಾಲ್ಕು ವೇದಗಳ ಜೊತೆಗೆ ಪಂಚಮವೇದವಾಗಿ ಆಯುರ್ವೇದ ಜ್ಞಾನವನ್ನು ಸೇರಿಸಬಹುದಾಗಿದೆ. ಅಂಥಹ ಆರೋಗ್ಯ ಜ್ಞಾನವನ್ನು ಹೊಂದಿರುವ ಈ ಪದ್ಧತಿಗೆ ಅಂತರಾಷ್ಟ್ರೀಯ ಮನ್ನಣೆ ಸಿಕ್ಕಿ ಮನೆ ಮನೆಗೆ ಆಯುರ್ವೇದವನ್ನು ಕೊಂಡೊಯ್ಯುವ ಕೆಲಸವಾಗಬೇಕೆಂದು ತಿಳಿಸಿದರು.ಮನೆಯಲ್ಲಿರುವ ಆಹಾರ ಪದಾರ್ಥ ಗಳನ್ನೆ ಬಳಸಿಕೊಂಡು ಆಯುರ್ವೇದ ವೈದ್ಯ ಪದ್ಧತಿ ಅನುಸರಿಸಬಹುದು. ಆದರೆ ಹಿತ್ತಲಗಿಡ ಮದ್ದಲ್ಲ ಎಂಬ ಉದಾಸೀನತೆ ಬಂದಿದೆ. ಪರಮ ಜ್ಞಾನವಾಗಿರುವ ಈ ಪದ್ಧತಿ ಅನುಸರಣೆಯಿಂದ ನಿರೋಗಿಗಳಾಗಬಹುದು ಎಂದು ಸ್ವಾಮೀಜಿ ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರ ಕುಮಾರ್ ಬಿ.ಯು ಜಗತ್ತಿನ 155 ದೇಶಗಳಲ್ಲಿ ಆಯುರ್ವೇದ ದಿನಾಚರಣೆ ಮಾಡಲಾಗುತ್ತಿದೆ.ಬರುವವರ್ಷರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಅಂತರಾಷ್ಟ್ರೀಯ ದಿನಾಚರಣೆಯನ್ನಾಗಿ ಘೋಷಿಸುವ ಸಾಧ್ಯತೆಗಳಿವೆ ಎಂದರು.

ಜಾಗತಿಕ ಆರೋಗ್ಯಕ್ಕಾಗಿ ಆಯುರ್ವೇದದ ಆವಿಷ್ಕಾರಗಳು ಮತ್ತು ಮಹಿಳಾ ಸಬಲೀಕರಣಕ್ಕಾಗಿ ಆಯುರ್ವೇದ ಈ ವರ್ಷದ ಘೋಷ ವಾಕ್ಯವಾಗಿದ್ದು ಈ ನಿಟ್ಟಿನಲ್ಲಿ ಅ.21 ರಿಂದ 4 ದಿನಗಳ ಕಾಲ ಜಿಲ್ಲೆಯ ವಿವಿಧ ಶಾಲಾ, ಕಾಲೇಜು ವಿದ್ಯಾರ್ಥಿಗಳು ಮತ್ತು ಮಹಿಳಾ ಸ್ವ ಸಹಾಯ ಸಂಘಗಳ ಪದಾಧಿಕಾರಿಗಳಿಗೆ ಜಾಗೃತಿ ಮೂಡಿಸಲಾಗಿದೆ ಎಂದರು.

ಆಯುಷ್ ಮಂತ್ರಾಲಯವು 2016ನೇ ಇಸವಿಯಿಂದ ರಾಷ್ಟ್ರೀಯ ಆಯುರ್ವೇದ ದಿನವನ್ನು ಘೋಷಿಸಿ ಇದರ ಅಂಗವಾಗಿ ಲಾಂಛನವನ್ನುಬಿಡುಗಡೆಗೊಳಿಸಿದೆ. ಇದರ ಮಧ್ಯಭಾಗದಲ್ಲಿ ಭಗವಾನ್ ಧನ್ವಂತರಿಯ ನೆರಳುಗೆರೆ ಚಿತ್ರವಿದೆ, ಐದು ಎಲೆಗಳು ಪಂಚಮಹಾಭೂತಗಳನ್ನು ಹಾಗೂ ಅವುಗಳ ಕೆಳಗಿರುವ ಮೂರು ವೃತ್ತಗಳು ತ್ರಿದೋಷಗಳಾದ ವಾತ,ಪಿತ್ತ ಮತ್ತು ಕಫವನ್ನು ಪ್ರತಿನಿಧಿಸುತ್ತವೆ. ಇವೆಲ್ಲವನ್ನು ಸುತ್ತಿರುವ ಅಂಡಾಕಾರದ ಎಲೆಯು ಆಯುರ್ವೇದಈಮೂಲಭೂತತತ್ವಗಳನ್ನು ಆಧರಿಸಿದ ಸಂಪೂರ್ಣವಾಗಿ ಪ್ರಕೃತಿದತ್ತ ಚಿಕಿತ್ಸೆಯಾಗಿದೆ ಹಾಗೂ ಆಯುರ್ವೇದವು ಅಮೃತಸಮಾನವಾದುದೆಂದು ವಿವರಿಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಉಜ್ಜಪ್ಪ ಎಸ್.ಮಾಳಾಪುರ, ಅಶ್ವಿನಿ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಜ್ಞಾನೇಶ್ವರ, ತಪೋವನ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಅಶ್ವಿನಿ, ಸುಶ್ರುತ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಅಕ್ಬರ್ ಖಾನ್, ಪತಂಜಲಿ ಆಯುರ್ವೇದ ಸಮಿತಿ ಮುಖ್ಯಸ್ಥರಾದ ಷಣ್ಮುಖಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಜೂಜಾಟ: ಐವರು, 6130 ಹಣ ವಶ

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ಹೊಟ್ಟೆಪ್ಪನಹಳ್ಳಿ ಗಂಗಜ್ಜರ ಜಮೀನ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಚಿತ್ರಯ್ಯನಹಟ್ಟಿಯ ಈರಣ್ಣ(38) ಇತರೆ ನಾಲ್ವರನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಲಾಗಿದೆ ಎಂದು ಪಿಎಸ್ಐ ಧರೆಪ್ಪಬಾಳಪ್ಪದೊಡ್ಡಮನಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಖಚಿತ ಮಾಹಿತಿ ಮೇರೆಗೆ ಪೊಲೀಸ್ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿದಾಗ ಮೇಲ್ಕಂಡ ಎಲ್ಲರೂ ಜೂಜಾಟವಾಡುತ್ತಿದ್ದು, ಜೂಜಾಟದ ಹಣ 6130 ವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ.

### ಜೀವನದಲ್ಲಿ ಜಿಗುಪ್ಸೆ ನೇಣಿಗೆ ಶರಣಾದ ಯುವಕ

» **ಚಳ್ಳಕೆರೆ**

ತಾಲ್ಲೂಕಿನ ದೇವರಮರಿಕುಂಟೆ ಗ್ರಾಮದ ಮಲ್ಲಿಕಾರ್ಜುನ(35) ಕಳೆದ ಕೆಲವು ತಿಂಗಳುಗಳಿಂದ ಮಾನಸಿಕವಾಗಿ ನೊಂದಿದ್ದು, ಜಿಗುಪ್ಸೆಗೊಂಡು ಮಂಗಳವಾರ ಮಧ್ಯಾಹ್ನ ತನ್ನ ಮನೆಯಲ್ಲೇ ನೇಣುಹಾಕಿಕೊಂಡಿದ್ದಾನೆ. ಕೂಡಲೇ ಆತನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದಾಗ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಮೃತನ ಪತ್ನಿ ಮಾನಸ ಗಂಡನ ಆತ್ಮಹತ್ಯೆಗೆ ಮಾನಸಿಕ ಖಾಯಿಲೆ ಎಂದು ದೂರು ನೀಡಿದ್ದು, ಎಎಸ್ಐ ಶಿವಣ್ಣ ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

### ದತ್ತಿನಿಧಿ ಪ್ರಶಸ್ತಿಗಾಗಿ ಪತ್ರಕರ್ತರಿಂದ ಲೇಖನಗಳ ಆಹ್ವಾನ

» **ಚಿತ್ರದುರ್ಗ**

ಕರ್ನಾಟಕ ಮಾಧ್ಯಮ ಅಕಾಡೆಮಿಯು 2023 ಮತ್ತು 2024 ನೇ ಸಾಲಿನ ವಿವಿಧ ದತ್ತಿನಿಧಿ ಪ್ರಶಸ್ತಿಗಳಿಗಾಗಿ ಪತ್ರಕರ್ತರಿಂದ ಲೇಖನಗಳನ್ನು ಆಹ್ವಾನಿಸಿದೆ.

ಬೆಂಗಳೂರಿನ "ಅಭಿಮಾನಿ ಪ್ರಕಾಶನ" ಸಂಸ್ಥೆಯು ರಾಜ್ಯ ಮತ್ತು ಜಿಲ್ಲಾಮಟ್ಟದ ಕನ್ನಡ ಪತ್ರಿಕೆಗಳಲ್ಲಿ "ಸಾಮಾಜಿಕ ಸಮಸ್ಯೆ"ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ " ಅಭಿಮಾನಿ ಪ್ರಶಸ್ತಿ" ಮೈಸೂರಿನ "ಮೈಸೂರು ದಿಗಂತ" ಪತ್ರಿಕಾ ಸಂಸ್ಥೆಯು "ಮಾನವೀಯ ಸಮಸ್ಯೆ" ಗಳನ್ನು ಪರಿಣಾಮಕಾರಿಯಾಗಿ ಪ್ರತಿಬಿಂಬಿಸುವ ಲೇಖನ–ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ", ಬೆಂಗಳೂರಿನ ಅಭಿಮನ್ಯು ಪತ್ರಿಕಾ ಸಂಸ್ಥೆಯು "ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ಅಂಕಣ/ಸಂಪಾದಕೀಯ/ಪರಿಣಾಮಕಾರಿ ವರದಿಗೆ ಅಭಿಮನ್ಯು ಪ್ರಶಸ್ತಿ, ಬೆಂಗಳೂರಿನ "ಪ್ರಜಾ ಸಂದೇಶ" ಪತ್ರಿಕಾ ಸಂಸ್ಥೆಯು ಶೋಷಣೆಯನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಲೇಖನಕ್ಕೆ " ಪ್ರಜಾ ಸಂದೇಶ ದತ್ತಿ ಪ್ರಶಸ್ತಿ " ಈ ದತ್ತಿ ಪ್ರಶಸ್ತಿಗಳು ತಲಾ ಹತ್ತು ಸಾವಿರ ರೂ. ನಗದು ಬಹುಮಾನ ಒಳಗೊಂಡಿದೆ. ಸಂಸ್ಥೆಗಳು ದತ್ತಿಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಸ್ಥಾಪಿಸಿವೆ.


2023 ನೇ ಸಾಲಿನ ಪ್ರಶಸ್ತಿಗಳು: 2023 ಜನವರಿ ಯಿಂದ ಡಿಸೆಂಬರ್–2023 ರವರೆಗೆ, ಪ್ರಕಟವಾಗಿರುವ "ಸಾಮಾಜಿಕ ಸಮಸ್ಯೆ" ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ "ಅಭಿಮಾನಿ ಪ್ರಶಸ್ತಿ–2023", "ಮಾನವೀಯ ಸಮಸ್ಯೆ"ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ–2023" ಶೋಷಣೆಯನ್ನು ಪರಿಣಾಮ ಕಾರಿಯಾಗಿ ಬಿಂಬಿಸುವ ಲೇಖನಕ್ಕೆ " ಪ್ರಜಾ ಸಂದೇಶ ಪ್ರಶಸ್ತಿ–2023" ಹಾಗೂ "ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ/ ಸಂಪಾದಕೀಯ/ ಪರಿಣಾಮಕಾರಿ ವರದಿಗೆ "ಅಭಿಮನ್ಯು ದತ್ತಿ ಪ್ರಶಸ್ತಿ –2023" ಎಂದು ದಾಖಲಿಸಿ ಪ್ರತ್ಯೇಕವಾಗಿ ಕಳುಹಿಸಬೇಕು.2024 ನೇ ಸಾಲಿನ ಪ್ರಶಸ್ತಿಗಳು :2024 ಜನವರಿ ಯಿಂದ ಸೆಪ್ಟೆಂಬರ್ 2024 ರವರೆಗೆ ಪ್ರಕಟವಾಗಿರುವ "ಸಾಮಾಜಿಕ ಸಮಸ್ಯೆ" ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ "ಅಭಿಮಾನಿ ಪ್ರಶಸ್ತಿ–2024", "ಮಾನವೀಯ ಸಮಸ್ಯೆ"ಗಳನ್ನು ಪ್ರತಿಬಿಂಬಿಸುವ ಲೇಖನ ವರದಿಗಳಿಗೆ "ಮೈಸೂರು ದಿಗಂತ ಪ್ರಶಸ್ತಿ–2024" ಶೋಷಣೆಯನ್ನು ಪರಿಣಾಮ ಕಾರಿಯಾಗಿ ಬಿಂಬಿಸುವ ಲೇಖನಕ್ಕೆ " ಪ್ರಜಾ ಸಂದೇಶ ಪ್ರಶಸ್ತಿ–2024 ಹಾಗೂ "ದಮನಿತ ಸಮುದಾಯಗಳ ಪರ ದನಿಯಾದ ಅತ್ಯುತ್ತಮ ಲೇಖನ/ ಅಂಕಣ/ ಸಂಪಾದಕೀಯ/ ಪರಿಣಾಮಕಾರಿಯಾದ ವರದಿಗೆ "ಅಭಿಮನ್ಯು ಪ್ರಶಸ್ತಿ –2024 ಎಂದು ದಾಖಲಿಸಿ ಪ್ರತ್ಯೇಕವಾಗಿ ಕಳುಹಿಸಬೇಕು. ಲೇಖನ–ವರದಿಗಳನ್ನು ಇದೇ ದಿನಾಂಕ : 20/11/2024ರ ಒಳಗಾಗಿ ಕಾರ್ಯದರ್ಶಿ, ಕರ್ನಾಟಕ ಮಾಧ್ಯಮ ಅಕಾಡೆಮಿ "ಅಭಿಮಾನಿ ಪ್ರಶಸ್ತಿ–2023", "ಅಭಿಮಾನಿ ಪ್ರಶಸ್ತಿ–2024" ಹಾಗೂ "ಮೈಸೂರು ದಿಗಂತ ಪ್ರಶಸ್ತಿ–2023" "ಮೈಸೂರು ದಿಗಂತ ಪ್ರಶಸ್ತಿ–2024" "ಪ್ರಜಾ ಸಂದೇಶ ಪ್ರಶಸ್ತಿ–2023", "ಪ್ರಜಾ ಸಂದೇಶ ಪ್ರಶಸ್ತಿ–2024" ಹಾಗೂ "ಅಭಿಮನ್ಯು ಪ್ರಶಸ್ತಿ –2023", "ಅಭಿಮನ್ಯು ಪ್ರಶಸ್ತಿ–2024" ಎಂದು ಸ್ಪಷ್ಟವಾಗಿ ಬರೆದು ಲೇಖನಗಳನ್ನು ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ. ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು–560001. ಇವರಿಗೆ ಕಳುಹಿಸಲು ಅಥವಾ kmaprashast@gmail.com ಗೆ ಇ – ಮೇಲ್ ಮೂಲಕ ಕಳುಹಿಸಲು ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹದಲ್ಲಿ ಜಿಲ್ಲಾ ನ್ಯಾಯಾಧೀಶರಾದ ರೋಣ್ ವಾಸುದೇವ್**

# ದೇಶದ ಪ್ರಗತಿಗೆ ಭ್ರಷ್ಟಾಚಾರ ಮಾರಕ

» **ಚಿತ್ರದುರ್ಗ**





ದೇಶದ ಪ್ರಗತಿಗೆ ಭ್ರಷ್ಟಾಚಾರವು ಮಾರಕವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ್ ವಾಸುದೇವ್ ಹೇಳಿದರು.

ನಗರದ ಎಸ್‌ಜೆಎಂ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಮಂಗಳವಾರ ಕರ್ನಾಟಕ ಲೋಕಾಯುಕ್ತ ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಎಸ್‌ಐಎಂ ತಾಂತ್ರಿಕ ಮಹಾವಿದ್ಯಾಲಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಾಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಆರ್ಥಿಕ ಪ್ರಗತಿಯಲ್ಲಿ ಯಾವುದೇ ಅಡ್ಡಿ ಇಲ್ಲದೆ ಬೆಳವಣಿಗೆಯಾಗಬೇಕಾದರೆ ಭ್ರಷ್ಟಾಚಾರ ನಿರ್ಮೂಲನೆ ಅವಶ್ಯಕ. ಇಂದಿನ ವಿದ್ಯಾರ್ಥಿಗಳು ದೇಶದ ಮುಂದಿನ ಪ್ರಜೆಗಳು, ನಿಮ್ಮ ಪಾತ್ರ ಬಹುಮುಖ್ಯ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕ ಎನ್. ವಾಸುದೇವರಾಮ್ ಮಾತನಾಡಿ, ಭ್ರಷ್ಟಾಚಾರ ಎಲ್ಲಾ ಕ್ಷೇತ್ರಗಳಲ್ಲೂ ನೆಲೆಸಿದೆ. ಭಾರತದಂತಹ ಅಭಿವೃದ್ಧಿಶೀಲ ರಾಷ್ಟ್ರವು ಭ್ರಷ್ಟಾಚಾರದಲ್ಲಿ ಜಾಗತಿಕ ಮಟ್ಟದಲ್ಲಿ 93ನೇ ಸ್ಥಾನ ಪಡೆದುಕೊಂಡಿದೆ. ದೇಶದ ಅಭಿವೃದ್ಧಿಗೆ ಭ್ರಷ್ಟಾಚಾರ ಒಂದು ಮಾರಕ. ಆದ್ದರಿಂದ ತಾವುಗಳು ಭ್ರಷ್ಟಾಚಾರದ ಬಗ್ಗೆ ದೂರುಗಳಿದ್ದಲ್ಲಿ ನಮ್ಮ ಲೋಕಾಯುಕ್ತ ಸಂಸ್ಥೆಗೆ ತಿಳಿಸಿ ನಾವು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ವಿಶೇಷ ಲೋಕಾಯುಕ್ತ ಅಭಿಯೋಜಕ ಬಿ.ಮಲ್ಲೇಶಪ್ಪ ಮಾತನಾಡಿ, ಭ್ರಷ್ಟಾಚಾರವೊಂದು ಸಾಮಾಜಿಕ ಪಿಡುಗು. ಯಾವುದೇ ಸಾರ್ವಜನಿಕ ಸೇವಕ ತನ್ನ ನ್ಯಾಯಬದ್ಧ ಸೇವೆಯನ್ನು ಸಾರ್ವಜನಿಕರಿಗೆ ನೀಡಲು ವಿಳಂಬ ಮಾಡಿದರೂ ಅದು ಭ್ರಷ್ಟಾಚಾರವೇ ಆಗಿರುತ್ತದೆ ಎಂದು ತಿಳಿಸಿದರು.

ಎಸ್‌ಜೆಎಂ ತಾಂತ್ರಿಕ ಮಹಾವಿದ್ಯಾಲಯ ಪ್ರಾಚಾರ್ಯ ಪಿ.ಬಿ.ಭರತ್ ಮಾತನಾಡಿ, ಭ್ರಷ್ಟಾಚಾರ ವ್ಯಕ್ತಿಯ ಜೀವನದ ವಾಹನದ ಚಾಲನೆಗೆ ಬೇಕಾಗುವ ತೈಲವೆಂದು ಕೆಲವರು ಭಾವಿಸಿದ್ದಾರೆ. ಅದರ ನಿರ್ಮೂಲನೆ ಮತ್ತು ತಡೆಗಟ್ಟುವಿಕೆಯಲ್ಲಿ ಯುವಕರ ಪಾತ್ರ ಅತಿಮುಖ್ಯ ಎಂದು ತಿಳಿಸಿದರು. ಇದೇ ಸಂದಭದಲ್ಲಿ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕ ಎನ್. ಮೃತ್ಯುಂಜಯ ಅವರು ಲೋಕಾಯುಕ್ತ ಕಾಯ್ದೆ ಹಾಗೂ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ ಬಗ್ಗೆ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ಬಿ.ಮಂಜುನಾಥ್, ಸಂಗಮನಾಥ್ ಎಸ್ ಹೊಸಮನಿ ಸೇರಿದಂತೆ ಎಸ್‌ಜೆಎಂ ತಾಂತ್ರಿಕ ಮಹಾವಿದ್ಯಾಲಯದ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ವಿಕಲಚೇತನರ ಆರೈಕೆ ಮಾನಸಿಕ ಏಕಾಗ್ರತೆಗೆ ಯೋಗ, ಧ್ಯಾನದಲ್ಲಿ ಭಾಗಿಯಾಗಿ: ಡಾ.ದೇವರಾಜ್

» **ದಾವಣಗೆರೆ**



ವಿಕಲಚೇತನರಿಗೆ ಆರೈಕೆ ಮಾಡಲು ಮಾನಸಿಕ ಶಾಂತತೆ, ಏಕಾಗ್ರತೆ, ಬದ್ಧತೆಗಾಗಿ ಯೋಗಾ, ಧ್ಯಾನ, ಮನರಂಜನಾತ್ಮಕ ಚಟುವಟಿಕೆಗಳಲ್ಲಿ ಪ್ರತಿದಿನ ಪಾಲ್ಗೊಳ್ಳಿ ಎಂದು ಆರೈಕೆಗಾರರನ್ನು ಉದ್ದೇಶಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ದೇವರಾಜ್ ಮಾತನಾಡಿದರು.

ನಗರದ ಅಂಗವಿಕಲರ ಆಶಾಕಿರಣ ಟ್ರಸ್ಟ್ ಬುದ್ಧಿಮಾಂದ್ಯ ಮಕ್ಕಳ ಭಾವೈಕ್ಯತೆ ಸಂಸ್ಥೆಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಎಪಿಡಿ ಸಂಸ್ಥೆ, ಅಂಗವಿಕಲರ ಆಶಾಕಿರಣ ಟ್ರಸ್ಟ್, ಭಾರತೀಯ ಕಲಾ ಸಾಂಸ್ಕೃತಿಕ ಅಕಾಡೆಮಿ, ಮಾನಸಧಾರ ಸಮುದಾಯ ಮಾನಸಿಕ ಆರೋಗ್ಯ ಕೇಂದ್ರ ಮತ್ತು ಆರೈಕೆದಾರರ ಗುಂಪು ಇವರ ಸಹಯೋಗದಲ್ಲಿ ಏರ್ಪಡಿಸಲಾದ ವಿಶ್ವ ಆರೈಕೆದಾರರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ವಿಕಲಚೇತನರ ಆರೈಕೆಯಲ್ಲಿ ಆರೈಕೆದಾರರು ಪ್ರಮುಖ ಪಾತ್ರವನ್ನು ವಹಿಸುತ್ತಿರುವುದು ಶ್ಲಾಘನೀಯ. ಪ್ರತಿಯೊಬ್ಬ ಹಾರೈಕೆದಾರರು ಎಲ್ಲಾ ವಿಧದ ವಿಕಲಚೇತನರಿಗೆ ಆತ್ಮಸ್ಥೈರ್ಯ ತುಂಬುವುದರ ಜೊತೆಗೆ ತರಬೇತಿದಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಎಲ್ಲಾ ಆರೈಕೆದಾರರು ತಮ್ಮ ಮನೆಯಲ್ಲಿರುವ ವಿಕಲಚೇತನಗಳಿಗೆ ಆರೈಕೆ ಮಾಡುವುದರ ಜೊತೆಗೆ ತಮ್ಮ ಮಾನಸಿಕ ಆರೋಗ್ಯದ ಬಗ್ಗೆ ಗಮನಹರಿಸುವುದು ಒಳ್ಳೆಯದು. ಏಕೆಂದರೆ ಆರೈಕೆ ಮಾಡುವವರು ಎಷ್ಟು ಮಾನಸಿಕವಾಗಿ ಸದೃಢವಾಗಿರುತ್ತಾರೋ ಆಗ ಮಾತ್ರ ತೀವ್ರತರ ಕಾಯಿಲೆ ನ್ಯೂನ್ಯತೆ ಇರುವ ವಿಕಲಚೇತನರಿಗೆ ಆರೈಕೆ ಮಾಡಲು ಸಾಧ್ಯ ಎಂದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಡಾ. ಕೆ.ಕೆ ಪ್ರಕಾಶ್ ಅಧ್ಯಕ್ಷತೆ ವಹಿಸಿ ಮಾತನಾಡಿ ಸರ್ಕಾರ ವಿಕಲಚೇತನರ ಅಭಿವೃದ್ಧಿಗಾಗಿ ಹಲವು ಯೋಜನೆಗಳನ್ನು ಅನುಷ್ಠಾನ ಮಾಡುವುದರ ಜೊತೆಗೆ ವಿಕಲಚೇತನರ ಆರೈಕೆದಾರರಿಗೂ ಸ್ವಾಸ್ಥ್ಯ ಜೀವನವನ್ನು ನಡೆಸಲು ಪೋಷಕ ಭತ್ಯೆ ಸೇರಿದಂತೆ ಇನ್ನೂ ಅನೇಕ ಯೋಜನೆಗಳನ್ನು ಆರೈಕೆದಾರರಿಗೆ ಸಹಾಯವಾಗಲಿ ಎಂದು ಜಾರಿಗೊಳಿಸಲಾಗಿದೆ. ಆದ್ದರಿಂದ ಎಲ್ಲ ಯೋಜನೆಗಳನ್ನು ತಾವೆಲ್ಲರೂ ಪಡೆದುಕೊಂಡು ಸ್ವಾಸ್ಥ್ಯ ಜೀವನವನ್ನು ನಡೆಸಬೇಕು ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಇಲಾಖೆ ಮನೋವೈದ್ಯ ಡಾ.ಸಂತೋಷ್ ಕುಮಾರ್ ಎಂ ಮಾತನಾಡಿ ಪ್ರತಿಯೊಬ್ಬರಿಗೂ ಹಾಗೂ ಆರೈಕೆದಾರರಿಗೂ ಕೂಡ ಸಮಸ್ಯೆ ಇದ್ದೇ ಇರುತ್ತದೆ, ಆದರೆ ಅವುಗಳನ್ನು ಎದುರಿಸಿ ನಿಲ್ಲೋದೇ ಮನುಷ್ಯನ ಗುಣವಾಗಿದೆ. ಈ ಸಮಸ್ಯೆಗಳನ್ನು ಎದುರಿಸುವುದಕ್ಕೆ ನಮ್ಮಲ್ಲಿ ಜೀವನ ಕೌಶಲ್ಯಗಳನ್ನು ಅಳವಡಿಸಿಕೊಂಡರೆ ಮಾತ್ರ ಸಮಸ್ಯೆಗಳನ್ನು ಎದುರಿಸಿ ನಿಲ್ಲಬಹುದು, ಆದ್ದರಿಂದ ತಾವೆಲ್ಲರೂ ಕೂಡ ಜೀವನ ಕೌಶಲ್ಯಗಳನ್ನು ಅಳವಡಿಸಿಕೊಳ್ಳಿ ಎಂದರು.

ಅಂಗವಿಕಲರ ಆಶಾಕಿರಣ ಟ್ರಸ್ಟ್ ಅಧ್ಯಕ್ಷರಾದ ರಮಣ್ ಚಂದ್ ವಿಶೇಷಚೇತನರ ಆರೈಕೆದಾರರು ಹಾಗೂ ಆರ್.ಪಿ.ಡಿ ಟಾಸ್ಕ್‌ಫೋರ್ಸ್ ಉಪಾಧ್ಯಕ್ಷರಾದ ವಿಜಯಲಕ್ಷ್ಮಿ, ವಿಕಲಚೇತನರ ಇಲಾಖೆ ಜಿಲ್ಲಾ ಸಂಯೋಜಕರು, ನಗರ ಮತ್ತು ಗ್ರಾಮೀಣ ಪುನರ್ ವಸತಿ ಕಾರ್ಯಕರ್ತರಾದ ನಾಗರಾಜ್, ಅಂಗವಿಕಲರ ಆಶಾಕಿರಣ ಟ್ರಸ್ಟ್ ನ ಸಿಬ್ಬಂದಿ ಉಪಸ್ಥಿತರಿದ್ದರು.

## ಜೋಗಿಮಟ್ಟಿ ಗಿರಿಧಾಮದಲ್ಲಿ ನೂರಾರು ಔಷಧೀಯ ಸಸ್ಯಗಳಿವೆ



» **ಚಿತ್ರದುರ್ಗ**

ಬೇರೆ ಬೇರೆ ವೈದ್ಯಕೀಯ ಪದ್ಧತಿಯಲ್ಲಿ ಗುಣಪಡಿಸಲಾಗದಂತ ಕಾಯಿಲೆಯನ್ನು ಪಾರಂಪರಿಕ ವೈದ್ಯ ಪದ್ಧತಿಯಲ್ಲಿ ವಾಸಿ ಮಾಡಬಹುದೆಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ತಿಳಿಸಿದರು.ಪಾರಂಪರಿಕ ವೈದ್ಯ ಪರಿಷತ್–ಕರ್ನಾಟಕ ತಾಲ್ಲೂಕು ಘಟಕದಿಂದ ಪಿ ಅಂಡ್ ಟಿ. ಕ್ವಾರ್ಟಸ್ ಹತ್ತಿರುವಿರುವ ಗಣಪತಿ ದೇವಸ್ಥಾನದಲ್ಲಿ ಮಂಗಳವಾರ ಏರ್ಪಡಿಸಲಾಗಿದ್ದ ಧನ್ವಂತರಿ ಜಯಂತಿಯಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.ಪ್ರತಿ ಗ್ರಾಮ, ತಾಲ್ಲೂಕು, ಜಿಲ್ಲಾ ಪಂಚಾಯಿತಿ ಮಟ್ಟದಲ್ಲಿರುವ ಜೀವ ವೈವಿಧ್ಯ ಮಂಡಳಿಯಲ್ಲಿ ಸಸ್ಯ ಪ್ರಾಣಿ ಪ್ರಬೇದಗಳನ್ನು ದಾಖಲೆಯಾಗಿಟ್ಟುಕೊಳ್ಳಬಹುದು. ಪಾರಂಪರಿಕ ವೈದ್ಯ ಪದ್ಧತಿಯೆಂದರೆ ಅನುಭವದ ಮೇಲೆ ಚಿಕಿತ್ಸೆ ನೀಡುವುದು. ಅಪರೂಪದ ಸಸ್ಯ ಪ್ರಬೇದಗಳಲ್ಲಿ ಅನೇಕ ರೀತಿಯ ಔಷಧೀಯ ಗುಣಗಳಿರುತ್ತವೆ. ಅವುಗಳನ್ನು ಪತ್ತೆ ಹಚ್ಚಿ ಅಷ್ಟಕ್ಕೆ ಸುಮ್ಮನಾಗಬಾರದು ವಂಶಪಾರಂಪರ್ಯವಾಗಿ ಮುಂದುವರೆಸಿಕೊಂಡು ಹೋದರೆ ಸಮಾಜಕ್ಕೆ ಅದರಿಂದ ಹೆಚ್ಚು ಪ್ರಯೋಜನಕಾರಿಯಾಗಲಿದೆ ಎಂದು ಹೇಳಿದರು. ಜೋಗಿಮಟ್ಟಿ ಗಿರಿಧಾಮದಲ್ಲಿ ನೂರಾರು ಬಗೆಯ ಔಷಧೀಯ ಸಸ್ಯಗಳಿವೆ. ಅಂತಹ ಅಪರೂಪದ ಸಸ್ಯಗಳನ್ನು ಸಂರಕ್ಷಿಸಿ ಜೋಪಾನ ಮಾಡಬೇಕು ಎಂದು ಪಾರಂಪರಿಕ ವೈದ್ಯರುಗಳಲ್ಲಿ ಮನವಿ ಮಾಡಿದರು.ಕಬೀರಾನಂದಾಶ್ರಮದ ಶಿವಲಿಂಗಾನಂದಸ್ವಾಮಿಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತ ನಮ್ಮ ಸುತ್ತಮುತ್ತಲಿನಲ್ಲಿಯೇ ಅನೇಕ ಔಷಧೀಯ ಸಸ್ಯಗಳಿವೆ. ಅವುಗಳನ್ನು ಗುರುತಿಸಿ ಉಪಯೋಗಿಸಿಕೊಳ್ಳುವ ವಿಧಾನ ಗೊತ್ತಿಲ್ಲ. ವನಸ್ಪತಿ ಎಂದರೆ ನಿರುಪಯೋಗವಲ್ಲ. ಒಂದಲ್ಲ ಒಂದು ರೀತಿಯ ಕಾಯಿಲೆಗೆ ಬಳಕೆಯಾಗುತ್ತದೆ. ಬಳಸಿಕೊಳ್ಳುವ ಜ್ಞಾನವಿರಬೇಕೆಂದರು.

**ಪ್ರಮುಖ ಸುದ್ದಿ**

# ಉಪ ಚುನಾವಣೆ: ಕಾಂಗ್ರೆಸ್ ವಿರುದ್ಧ ಮಾದಿಗರು ಮತ ಹಾಕಿ

» **ಚಿತ್ರದುರ್ಗ**



ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸುಪ್ರೀಂಕೋರ್ಟ್ ತೀರ್ಪನ್ನು ನಿಜವಾಗಿಯೂ ಗೌರವಿಸುವುದಾದರೆ ತಕ್ಷಣವೆ ಒಳ ಮೀಸಲಾತಿಯನ್ನು ಜಾರಿಗೆ ತರಬೇಕು. ಇಲ್ಲವಾದಲ್ಲಿ ರಾಜ್ಯದ ಮೂರು ವಿಧಾಸನಭೆಗೆ ನಡೆಯುವ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ವಿರುದ್ಧ ಮಾದಿಗರು ಮತ ನೀಡಬೇಕಾಗುತ್ತದೆಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಲಕ್ಷ್ಮಣ್ ಬೆದರಿಕೆ ಹಾಕಿದರು.

ಬಿಜೆಪಿ.ಜಿಲ್ಲಾ ಎಸ್ಸಿ. ಮೋರ್ಚಾ ವಿಭಾಗದಿಂದ ಪತ್ರಕರ್ತರ ಭವನದಲ್ಲಿ ಮಂಗಳವಾರ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಒಳ ಮೀಸಲಾತಿಯನ್ನು ಜಾರಿಗೊಳಿಸುವುದು ಆಯಾ ರಾಜ್ಯ ಸರ್ಕಾರಗಳಿಗಿದೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿ ಮೂರು ತಿಂಗಳಾಗುತ್ತಿದ್ದರೂ ಅನುಷ್ಠಾನಗೊಳಿಸುವಲ್ಲಿ ಮುಖ್ಯಮಂತ್ರಿ ಹಿಂದೇಟು ಹಾಕುತ್ತಿರುವುದನ್ನು ವಿರೋಧಿಸಿ ಉಗ್ರ ಹೋರಾಟ ನಡೆಸಬೇಕಾಗುತ್ತದೆಂದು ಎಚ್ಚರಿಸಿದರು.

ಎಂ.ಶಿವಮೂರ್ತಿ ಚಳ್ಳಕೆರೆ ಮಾತನಾಡಿ ಸುಪ್ರೀಂಕೋರ್ಟ್ ತೀರ್ಪಿನನ್ವಯ ಒಳ ಮೀಸಲಾತಿಯನ್ನು ಜಾರಿಗೊಳಿಸುವ ಬದಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೋಮವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮತ್ತೊಂದು ಆಯೋಗ ರಚಿಸುವ ನಾಟಕವಾಡುತ್ತಿರುವುದು ಅತ್ಯಂತ ಖಂಡನೀಯ. ಒಂದೊಂದು ಕಡೆ ಒಂದೊಂದು ರೀತಿಯ ವಿಭಿನ್ನ ಹೇಳಿಕೆಗಳನ್ನು ನೀಡುತ್ತ ಮಾದಿಗರನ್ನು ನಿರ್ಲಕ್ಷಿಸುವ ಬದಲು ಮೊದಲು ಒಳ ಮೀಸಲಾತಿ ಜಾರಿಗೆ ತರಲಿ. ಇಲ್ಲವಾದಲ್ಲಿ ಅಹಿತಕರ ಹೋರಾಟಕ್ಕೂ ಮಾದಿಗರು ಸಿದ್ದರಿದ್ದೇವೆ. ದತ್ತಾಂಶ, ಡಾಟ ಗೊತ್ತಿಲ್ಲದವರಂತೆ ನಾಟಕವಾಡುತ್ತಿರುವುದನ್ನು ನಾವುಗಳು ಸಹಿಸುವುದಿಲ್ಲ. ಆಯೋಗದ ಮೇಲೊಂದು ಆಯೋಗ ರಚಿಸುವುದಾಗಿ ಹೇಳಿ ನಮ್ಮ ಕಿವಿಗೆ ಹೂವು ಮುಡಿಸುವುದು ಬೇಡ ಎಂದು ಎಚ್ಚರಿಸಿದರು.

ವಿಧಾನಸಭೆ ಉಪ ಚುನಾವಣೆ ನೆಪ ಹೇಳುತ್ತ ಒಳ ಮೀಸಲಾತಿ ಜಾರಿಗೆ ತರುವುದನ್ನು ವಿಳಂಭ ಮಾಡುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ ಶಿವಮೂರ್ತಿ ಆಂಧ್ರ ಮಾದರಿಯಲ್ಲಿ ಹೋರಾಟಕ್ಕಿಳಿದು ರಾಜ್ಯದಲ್ಲಿರುವ ಕಾಂಗ್ರೆಸ್ ಪಕ್ಷವನ್ನು ಉರುಳಿಸುವುದಾಗಿ ಕಿಡಿ ಕಾರಿದರು.

ಎಸ್ಸಿ.ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೃಷ್ಣಮೂರ್ತಿ ಗೂಳಿಹಟ್ಟಿ ಮಾತನಾಡುತ್ತ ಒಳ ಮೀಸಲಾತಿಗಾಗಿ ಮೂವತ್ತು ವರ್ಷಗಳಿಂದಲೂ ನಿರಂತರವಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದ್ದರೂ ರಾಜ್ಯ ಸರ್ಕಾರ ಮೀನಾಮೇಷ ಎಣಿಸುತ್ತಿದೆ. ಸದಾಶಿವ ಆಯೋಗ ದತ್ತಾಂಶ ಕ್ರೂಢಿಕರಿಸಿಯೇ ಸರ್ಕಾರಕ್ಕೆ ವರದಿ ನೀಡಿದ ಮೇಲೆ ದತ್ತಾಂಶ ಡಾಟ ಎನ್ನುವ ಪದ ಮತ್ತೇಕೆ ಎಂದು ರಾಜ್ಯದ ಮುಖ್ಯಮಂತ್ರಿಯನ್ನು ಪ್ರಶ್ನಿಸಿದರು.

ಹರಿಯಾಣ, ತೆಲಂಗಾಣ ಸರ್ಕಾರಗಳು ಕೈಗೊಂಡ ದಿಟ್ಟ ನಿರ್ಧಾರದಂತೆ ರಾಜ್ಯ ಸರ್ಕಾರವು ತೀರ್ಮಾನ ತೆಗೆದುಕೊಂಡು ಮಾಧುಸ್ವಾಮಿ ನೀಡಿರುವ ದತ್ತಾಂಶವನ್ನು ಯಥಾವತ್ತಾಗಿ ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ಬಿಜೆಪಿ. ಎಸ್ಸಿ. ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಜಿ.ಹೆಚ್.ಮೋಹನ್ ಮಾತನಾಡಿ ಒಳ ಮೀಸಲಾತಿ ಜಾರಿಗೆ ತರುವ ಅಧಿಕಾರ ರಾಜ್ಯ ಸರ್ಕಾರಗಳಿಗಿದೆ ಎಂದು ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ನೀಡಿದ್ದರೂ ರಾಜ್ಯ ಸರ್ಕಾರಕ್ಕೆ ಇಚ್ಚಾಶಕ್ತಿಯಿಲ್ಲ. ಸಚಿವ ಸಂಪುಟ ಸಭೆಯಲ್ಲಿ ಹೊಸ ಆಯೋಗ ರಚಿಸುವ ಪ್ರಸ್ತಾಪವೆತ್ತಿರುವುದನ್ನು ನೋಡಿದರೆ ಅಹಿಂದಾ ನಾಯಕ ಎಂದೇಳಿಕೊಳ್ಳುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾದಿಗ ವಿರೋಧಿ ಎನ್ನುವುದು ಗೊತ್ತಾಗುತ್ತದೆ. ಕಣ್ಣೊರೆಸುವ ತಂತ್ರಗಾರಿಕೆ ಬೇಡ. ಕೂಡಲೆ ಒಳ ಮೀಸಲಾತಿ ಜಾರಿಯಾಗಬೇಕು. ಇಲ್ಲವಾದಲ್ಲಿ ಮೂರು ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಸೋಲಿಸಿ ತಕ್ಕ ಪಾಠ ಕಲಿಸಬೇಕಾಗುತ್ತದೆಂದರು.ಗ್ರಾ.ಪಂ ಮಾಜಿ ಸದಸ್ಯ ಮರಿಪಾಲಯ್ಯ, ಡಿ.ಓ.ಮುರಾರ್ಜಿ, ಗ್ರಾ.ಪಂ.ಮಾಜಿ ಅಧ್ಯಕ್ಷ ಶಂಕರಸ್ವಾಮಿ, ಡಿ.ತಿಪ್ಪೇಸ್ವಾಮಿ, ಸಿದ್ದಾರ್ಥ ವಿ. ನವೀನ್ ನಾಯಕ, ಚನ್ನಗಾನಹಳ್ಳಿ ಮಲ್ಲೇಶ್, ಕರಿಕೆರೆ ತಿಪ್ಪೇಸ್ವಾಮಿ, ರವಿಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಇಂದು ಚನ್ನೈನಲ್ಲಿ ನಡೆಯಲಿರುವ ಕಬ್ಬಡಿ ತಂಡದಲ್ಲಿ ಹೊಸದುರ್ಗದ ಕ್ರೀಡಾಪಟುಗಳು



» **ಹೊಸದುರ್ಗ**

ದಾವಣಗೆರೆ ವಿಶ್ವ ವಿದ್ಯಾನಿಲಯ ಕಬ್ಬಡಿ ತಂಡಕ್ಕೆ ಹೊಸದುರ್ಗ ಪದವಿ ಕಾಲೇಜಿನ ವಿದ್ಯಾರ್ಥಿಗಳಾದ ತಿಮ್ಮೋಜಿ ಮತ್ತು ಚಿದಾನಂದ ಆಯ್ಕೆಯಾಗಿದ್ದು ಇವರು ಗಳು ತಮಿಳುನಾಡಿನ ಚನ್ನೈನಲ್ಲಿ ಅ. 30 ರಿಂದ ನ.3 ರವರೆಗೆ ಒಟ್ಟು ಐದು ದಿನಗಳ ಕಾಲ ನಡೆಯಲಿರುವ ದಕ್ಷಿಣ ವಿಭಾಗದ ವಿಶ್ವವಿದ್ಯಾನಿಲಯದ ಕಬ್ಬಡಿ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ.

### ಶತಾಯುಷಿ ಯಲ್ಲಮ್ಮ ನಿಧನ

» **ಹೊಸದುರ್ಗ**



ಪಟ್ಟಣದ ಎಸ್.ಎಲ್.ಎನ್.ಎಸ್ ಬಸ್ ಹಾಗೂ ಕುಮಾರ್ ವೈನ್ಸ್ ಮಾಲಿಕರಾದ ಓ.ನಾಗೇಂದ್ರಯ್ಯ ಅವರ ತಾಯಿ ಶತಾಯುಷಿ ಶ್ರೀಮತಿ ಯಲ್ಲಮ್ಮ (105) ವಯೋ ಸಹಜದಿಂದ ಮಂಗಳವಾರ ಪಟ್ಟಣದ ವಿನಾಯಕ ಬಡಾವಣೆಯಲ್ಲಿರುವ ಅವರ ನಿವಾಸದಲ್ಲಿ ನಿಧನ ಹೊಂದಿದ್ದಾರೆ, ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು, ಸೊಸೆ, ಅಳಿಯಂದಿರು, ಮಮ್ಮೊಕ್ಕಳು ಹಾಗೂ ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ,ಇವರ ಅಂತ್ಯಕ್ರಿಯೆಯು ಅ.30 ರಂದು ಬುಧವಾರ ಬೆಳಿಗ್ಗೆ 10.30 ಕ್ಕೆ ಅವರ ಸ್ವಗ್ರಾಮವಾದ ಚಳ್ಳಕೆರೆ ತಾಲೂಕು ಗೋಪನಹಳ್ಳಿ ಗ್ರಾಮದ ಅವರ ತೋಟದಲ್ಲಿ ನೆರವೇರಲಿದೆ. ಶತಾಯುಷಿ ಯಲ್ಲಮ್ಮ ಅವರ ನಿಧನಕ್ಕೆ ಭಗೀರಥ ಪೀಠ ಬ್ರಹ್ಮವಿದ್ಯಾನಗರದ ಶ್ರೀ ಪುರುಷೋತ್ತಮಾನಂದ ಪುರಿ ಸ್ವಾಮೀಜಿ, ರಾಜ್ಯ. ಜಿಲ್ಲಾ ಹಾಗೂ ತಾಲೂಕು ಉಪ್ಪಾರ ಸಮಾಜದ ಮುಖಂಡರುಗಳು, ಜನಪ್ರತಿನಿಧಿಗಳು ಹಾಗೂ ಗಣ್ಯರು ಸಂತಾಪ ಸೂಚಿಸಿದ್ದಾರೆ.

### ಬಿಜೆಪಿ ಪಕ್ಷಕ್ಕೆ 50ಸಾವಿರ ಸದಸ್ಯರ ನೊಂದಾವಣಿ ಗುರಿ: ಬಾಳೆಮಂಡಿ ರಾಮದಾಸ್

» **ಮೊದಲ ಪುಟದಿಂದ**

ಅವರು, ಮಂಗಳವಾರ ನಗರದ ಪ್ರವಾಸಿಮಂದಿರದ ಮುಂಭಾಗದಲ್ಲಿ ಜಿಲ್ಲಾ ಬಿಜೆಪಿ ಸಾಮಾಜಿಕ ಜಾಲತಾಣ ಪ್ರಕೋಷ್ಠವತಿಯಿಂದ ಹಮ್ಮಿಕೊಂಡಿದ್ದ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು. ಕಳೆದ ಸುಮಾರು ಒಂದು ತಿಂಗಳಿನಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ ಪಕ್ಷದ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು, ಮುಖಂಡರು ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಚಳ್ಳಕೆರೆ ನಗರ ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಪಕ್ಷದ ಸದಸ್ಯತ್ವ ಅಭಿಯಾನ ಕಾರ್ಯಕ್ರಮ ನಿರಂತರವಾಗಿ ನಡೆಯುತ್ತಿದೆ. 5 ಸಾವಿರಕ್ಕೂ ಹೆಚ್ಚು ಜನರು ಪಕ್ಷದ ಸದಸ್ಯತ್ವವನ್ನು ಸ್ವೀಕರಿಸಿದ್ದಾರೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಬಿಜೆಪಿ ಸಾಮಾಜಿಕ ಜಾಲತಾಣಪ್ರಕೋಷ್ಠದ ಜಿಲ್ಲಾಧ್ಯಕ್ಷ ಮನೋಜ್‌ಹೊಸಮನೆ, ಈ ಹಿಂದೆ ಬಿಜೆಪಿ ಸದಸ್ಯತ್ವ ಕೇವಲ ನಗರ ಪ್ರದೇಶಕ್ಕೆ ಮಾತ್ರ ಸೀಮಿತವಾಗಿತ್ತು. ಆದರೆ, ಈಗ ಗ್ರಾಮೀಣ ಭಾಗದ ಗಲ್ಲಿ, ಗಲ್ಲಿಯಲ್ಲೂ ಸಹ ಸದಸ್ಯತ್ವ ಅಭಿಯಾನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯುತ್ತಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷೆ ವಹಿಸಿದ್ದ ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್ ಮಾತನಾಡಿ, ಚಳ್ಳಕೆರೆ ಮಂಡಲ ವ್ಯಾಪ್ತಿಯಲ್ಲಿ ಪಕ್ಷಕ್ಕೆ 50ಸಾವಿರಕ್ಕೂ ಹೆಚ್ಚು ನೂತನ ಸದಸ್ಯರನ್ನು ಸೇರ್ಪಡೆಮಾಡಿಕೊಳ್ಳುವ ಕಾರ್ಯಕ್ರಮ ಹಮ್ಮಿಕೊಂಡಿದೆ. ಇದರ ಯಶಸ್ಸಿಗೆ ಪಕ್ಷದ ಎಲ್ಲಾ ಹಂತದ ನಾಯಕರು, ಅಭಿಮಾನಿಗಳು, ಕಾರ್ಯಕರ್ತರು ಕೈಜೋಡಿಸಬೇಕು ಎಂದರು.

ಬಿಜೆಪಿಹಿರಿಯಮುಖಂಡಜೆ.ಪಿ.ಜಯಪಾಲಯ್ಯ, ಟಿ.ಮಂಜುನಾಥ, ಸೋಮಶೇಖರ್‌ಮಂಡಿಮಠ, ಎಲೆಭದ್ರಿ, ಈಶ್ವರನಾಯಕ, ಜೆ.ಕೆ.ತಿಪ್ಪೇಶ್, ಚನ್ನಗಾನಹಳ್ಳಿಮಲ್ಲೇಶ್, ಬಿ.ಎಸ್.ಶಿವಪುತ್ರಪ್ಪ, ಕರೀಕೆರೆ ತಿಪ್ಪೇಸ್ವಾಮಿ, ಎಂ.ಇಂದ್ರೇಶ್, ವೀರೇಶ್, ಜಿ.ಕೆ.ಹರೀಶ್, ತಿಪ್ಪೇಸ್ವಾಮಿ, ಮೋಹನ್, ವನಜಾ,

---

### ಪಾರದರ್ಶಕ ನೀತಿ ಮತ್ತು ನಿಸ್ವಾರ್ಥ ಸೇವೆಯ ಗುರಿಯಾಗಬೇಕು; ನ್ಯಾಯಾಧೀಶರಾದ ರಾಜೇಶ್ವರಿ ಎನ್ ಹೆಗಡೆ

# ಸಾರ್ವಜನಿಕ ಆಡಳಿತದಲ್ಲಿ ಭ್ರಷ್ಟಾಚಾರ ತೊಲಗಿಸಿ

» **ದಾವಣಗೆರೆ**

ಸಾರ್ವಜನಿಕ ಆಡಳಿತದ ಎಲ್ಲಾ ಕ್ಷೇತ್ರಗಳಲ್ಲಿ ಭ್ರಷ್ಟಾಚಾರವನ್ನು ತೊಲಗಿಸಲು ಆಡಳಿತದಲ್ಲಿ ಪಾರದರ್ಶಕತೆ, ನಿಸ್ವಾರ್ಥ ಸೇವೆ ಸಾರ್ವಜನಿಕ ಸೇವೆಯಲ್ಲಿ ಮೂಡಿಬರಬೇಕಿದೆ ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ ಲೋಕಾಯುಕ್ತ ವಿಭಾಗ, ಇವರುಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಆಯೋಜಿಸಿದ ಭ್ರಷ್ಟಾಚಾರ ನಿರ್ಮೂಲನಾ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಭ್ರಷ್ಟಾಚಾರವು ನಿರಂತರ ಸೇವೆ ಹಾಗೂ ಪ್ರಾಮಾಣಿಕತೆಯನ್ನು ತಿಂದು ಹಾಕುತ್ತದೆ, ಸಮಾಜ ಕಲುಷಿತಗೊಂಡರೆ, ವ್ಯವಸ್ಥೆಯ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಆದ್ದರಿಂದ ಪ್ರತಿಯೊಬ್ಬರು ಪಾರದರ್ಶಕವಾಗಿ ಮತ್ತು ಆತ್ಮಸಾಕ್ಷಿಯಿಂದ ತಮ್ಮ ಜವಾಬ್ದಾರಿಯ ಕರ್ತವ್ಯಗಳನ್ನು ನಿರ್ವಹಿಸಬೇಕು ಎಂದು ತಿಳಿಸಿದರು.

ಸರ್ಕಾರಿ ನೌಕರರು, ಖಾಸಗಿ ವಲಯಗಳ ನೌಕರರು ಸೇರಿದಂತೆ ಭ್ರಷ್ಟಾಚಾರ ನಿರ್ಮೂಲನೆಗೆ ಎಲ್ಲರೂ ಕೈ ಜೋಡಿಸಬೇಕು. ಸ್ವಯಂ ಪ್ರೇರಿತವಾಗಿ ಭ್ರಷ್ಟಾಚಾರ ನಿರ್ಮೂಲನೆಗೆ ಅನೇಕರು ಹೋರಾಡುತ್ತಿದ್ದಾರೆ. ಅಂತಹವರಿಗೆ ಬೆಂಬಲ ನೀಡಬೇಕು ಎಂದು ಹೇಳಿದರು.



ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಮಾಹಿತಿ ಹಾಗೂ ಸರ್ಕಾರಿ ಸೇವೆಗಳಿಗಾಗಿ ಬಂದಲ್ಲಿ ಅವರಿಗೆ ಉತ್ತಮ ಸೇವೆ ಒದಗಿಸಬೇಕು. ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರಿಂದ ಯಾವುದೇ ಹಣದ ಬೇಡಿಕೆ ಇಡದೇ ಪಾರದರ್ಶಕ ಸೇವೆ ನೀಡಬೇಕು. ಅಷ್ಟೇ ಅಲ್ಲದೇ ಭ್ರಷ್ಟಾಚಾರ ನಡೆದ ಕುರಿತು ಮಾಹಿತಿ ದೊರೆತಲ್ಲಿ ತಕ್ಷಣವೇ ಸಂಬಂಧಿಸಿದ ಅಧಿಕಾರಿಗಳಿಗೆ ವರದಿ ಮಾಡಬೇಕು ಎಂದು ತಿಳಿಸಿದರು.

ಸರ್ಕಾರಿ ವಲಯಗಳ ಸೇವೆಯ ಕುರಿತು ಸಾರ್ವಜನಿಕರಿಗೆ ಭರವಸೆ ಮೂಡಬೇಕು. ಸರ್ಕಾರಿ ಕಚೇರಿಗೆ ಮುಕ್ತವಾಗಿ ಬಂದು ನಿಗದಿತ ಅವಧಿಯಲ್ಲಿ ಸೇವೆಗಳನ್ನು ಪಡೆಯುವಂತೆ ಅವರಿಗೆ ಉತ್ತಮ ಸೇವೆ ನೀಡಬೇಕು. ಸಾರ್ವಜನಿಕರು ಸಹ ತಮ್ಮ ಸೇವೆಗಳನ್ನು ಪಡೆಯಲು ಯಾವುದೇ ಲಂಚ, ಆಮಿಷಗಳನ್ನು ನೀಡದೆ ಸೂಕ್ತ ಮಾಹಿತಿ ಹಾಗೂ ಸೇವೆಗಳನ್ನು ಪಡೆದುಕೊಳ್ಳಬೇಕು ಎಂದರು.

ಕೇಂದ್ರದಲ್ಲಿ ಸೆಂಟ್ರಲ್ ವಿಜಿಲೆನ್ಸ್ ಕಮಿಷನ್, ರಾಜ್ಯದಲ್ಲಿ ಲೋಕಾಯುಕ್ತ ಭ್ರಷ್ಟಾಚಾರದ ವಿರುದ್ಧ ಕಾರ್ಯ ನಿರ್ವಹಿಸುತ್ತಿವೆ. ಭ್ರಷ್ಟಾಚಾರ ವಿರೋಧಿಸಿ, ರಾಷ್ಟ್ರದ ಏಳಿಗಾಗಿ ಸಮಗ್ರತೆಯ ಸಂಸ್ಕೃತಿ ಎಂಬ ಧ್ಯೇಯ ವಾಕ್ಯದೊಂದಿಗೆ ಸರ್ದಾರ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಅಂಗವಾಗಿ ಪ್ರತಿ ವರ್ಷದಂತೆ ಜಿಲ್ಲೆಯಲ್ಲಿ ಭ್ರಷ್ಟಾಚಾರ ಮುಕ್ತ ಅರಿವು ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಮಾತನಾಡಿ, ಪ್ರತಿ ಸರ್ಕಾರಿ ನೌಕರರಲ್ಲಿ ಕರ್ತವ್ಯ ಪ್ರಜ್ಞೆ, ಪ್ರಾಮಾಣಿಕತೆ ಮತ್ತು ಮಾನವೀಯತೆ ಇದ್ದಾಗ ಯಾವ ಸಮಸ್ಯೆಗಳು ಬರುವುದಿಲ್ಲ. ಮತ್ತು ಬೇರೆಯವರಿಗೆ ತೊಂದರೆಯೂ ಆಗುವುದಿಲ್ಲ ಎಂದು ಹೇಳಿದರು.

ಅತಿ ಆಸೆ ಪಡದೆ, ಬಂದಿರುವ ಪಾಲನ್ನು ಅನುಭವಿಸಬೇಕು. ಪ್ರತಿಯೊಬ್ಬರಿಗೆ ಕೆಲಸದಲ್ಲಿ ತೃಪ್ತಿ, ಉತ್ತಮ ಆರೋಗ್ಯ ಮುಖ್ಯ. ಸದ್ಭಾವನೆಯಿಂದ ಕರ್ತವ್ಯ ನಿರ್ವಹಿಸಿದರೆ ಬದುಕು ಸುಂದರವಾಗಿರುತ್ತದೆ ಎಂದು ತಿಳಿಸಿದರು.

ಜನನ, ಮರಣ ಪ್ರಮಾಣ ಪತ್ರ ಹಾಗೂ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಂಶವೃಕ್ಷ, ಇಂತಹ ಮೂಲ ಕೆಲಸಗಳನ್ನು ಯಾವುದೇ ವಿಳಂಬ ಮಾಡದೆ ತ್ವರಿತವಾಗಿ ನೀಡಬೇಕು. ಅಧಿಕಾರಿಗಳು ಹಾಗೂ ನೌಕರರು ಕಚೇರಿಗೆ ಸಮಯಕ್ಕೆ ಸರಿಯಾಗಿ ಬಂದು, ಅಂದಿನ ಕೆಲಸವನ್ನು ಅಂದೇ ನಿರ್ವಹಿಸಿ ನಿಗಧಿತ ಸಮಯಕ್ಕೆ ಮನೆಗೆ ಹೋಗಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಸರ್ಕಾರಿ ಅಧಿಕಾರಿ, ನೌಕರರು ಕಾನೂನಿನ ಚೌಕಟ್ಟು ಹಾಗೂ ಆತ್ಮಸಾಕ್ಷಿಯೊಂದಿಗೆ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕಾಗುತ್ತದೆ. ಕೆಲವೊಮ್ಮೆ ಕಾಯ್ದೆ, ಕಾನೂನಿನ ಆಚೆ ಕೆಲವು ವಿವೇಚನಾ ಅಧಿಕಾರ ಚಲಾಯಿಸುವ ಸಂದರ್ಭ ಒದಗಿಬರುತ್ತದೆ. ಅಂತಹ ಸಂದರ್ಭದಲ್ಲಿ ಪ್ರತಿ ಕೆಲಸವನ್ನು ನ್ಯಾಯಬದ್ಧವಾಗಿ, ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಕರ್ತತ್ಯನಿಷ್ಟತೆ ಸಮರ್ಪಕವಾಗಿ ಇರಬೇಕೆಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ್ ಮಾ.ಕರೆಣ್ಣವರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ಅಭಿಯಾನದ ಕುರಿತು ಜಾಗೃತಿ ಅರಿವು ಸಪ್ತಾಹ 2024ರ ಭ್ರಷ್ಟಾಚಾರ ನಿಯಂತ್ರಣದ ಬಗ್ಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು

---

## ಮತದಾರರ ಪಟ್ಟಿ ಪ್ರಕಟ, ಸೇರ್ಪಡೆ, ತಿದ್ದುಪಡಿ, ಆಕ್ಷೇಪಣೆ ಸಲ್ಲಿಕೆಗೆ ನ.28 ರವರೆಗೆ ಅವಕಾಶ; ಎಡಿಸಿ

» **ದಾವಣಗೆರೆ**

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಭಾವಚಿತ್ರವಿರುವ ಕರಡು ಮತದಾರರ ಪಟ್ಟಿಯನ್ನು ಅಕ್ಟೋಬರ್ 29 ರಂದು ಪ್ರಕಟಿಸಲಾಗಿದ್ದು ಆಕ್ಷೇಪಣೆಗಳಿದ್ದಲ್ಲಿ ನವೆಂಬರ್ 28 ರವರೆಗೆ ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ಸಭೆ ನಡೆಸಿ ಕರಡು ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಿ ಮಾತನಾಡಿದರು. ಚುನಾವಣಾ ಆಯೋಗವು ಮತದಾರರ ಪಟ್ಟಿ ಪರಿಷ್ಕರಣೆಗೆ ಅವಕಾಶ ಕಲ್ಪಿಸಿದ್ದು ಇದಕ್ಕಾಗಿ ಅಕ್ಟೋಬರ್ 29 ರಂದು ಕರಡು ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ಸಲ್ಲಿಸಬಹುದಾಗಿದೆ.

ಮತದಾರರು ಹೊಸದಾಗಿ ಹೆಸರು ಸೇರ್ಪಡೆ, ತಿದ್ದುಪಡಿ, ವರ್ಗಾವಣೆ, ಪಟ್ಟಿಯಿಂದ ಕೈಬಿಡುವುದು ಸೇರಿದಂತೆ ಯಾವುದೇ ತಿದ್ದುಪಡಿಗಳಿದ್ದಲ್ಲಿ ಸಂಬಂಧಿಸಿದ ಮತಗಟ್ಟೆ ಅಧಿಕಾರಿಗೆ, ತಾಲ್ಲೂಕು ಕಚೇರಿಗೆ, ಉಪವಿಭಾಗಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ. ದಾವಣಗೆರೆ ನಗರದಲ್ಲಿ ಪಾಲಿಕೆ ಆಯುಕ್ತರಿಗೆ ಸಲ್ಲಿಸಬೇಕು. ಆಕ್ಷೇಪಣೆ, ಸೇರ್ಪಡೆ, ತಿದ್ದುಪಡಿಗಳನ್ನು ಬರುವ ನವೆಂಬರ್ 28 ರ ವರೆಗೆ ಸ್ವೀಕರಿಸಲಾಗುತ್ತದೆ. ನಿಗಧಿತ ನಮೂನೆಯಲ್ಲಿ ಸಲ್ಲಿಸಬಹುದಾಗಿದೆ ಎಂದರು ತಿಳಿಸಿದರು.

ಈ ಅವಧಿಯಲ್ಲಿ ಬರುವ ರಜಾ ದಿನಗಳಾದ ಎರಡನೇ ಮತ್ತು ನಾಲ್ಕನೇ ಶನಿವಾರ ಹಾಗೂ ಭಾನುವಾರಗಳಂದು ಪರಿಷ್ಕರಣೆಯ ವಿಶೇಷ



ಕಾರ್ಯಾಚರಣೆ ನಡೆಸಲಾಗುವುದು. 2025 ರ ಜನವರಿ 1 ಕ್ಕೆ 18 ವರ್ಷ ಪೂರ್ಣಗೊಳ್ಳುವವರು ಸಹ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಬಹುದಾಗಿದೆ. ಎಲ್ಲಾ ಆಕ್ಷೇಪಣೆಗಳನ್ನು ಡಿಸೆಂಬರ್ 24 ರೊಳಗಾಗಿ ಇತ್ಯರ್ಥ ಮಾಡಿ 2025 ರ ಜನವರಿ 6 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಈ ಬಗ್ಗೆ ಎಲ್ಲಾ ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಕಾರ್ಯಕರ್ತರ ಮೂಲಕ, ಮತಗಟ್ಟೆ ಮಟ್ಟದ ಏಜೆಂಟರ ಮೂಲಕ ಸಾರ್ವಜನಿಕರಿಗೆ ತಿಳಿಸಲು ಮನವಿ ಮಾಡಿದರು.

ಪ್ರಸ್ತುತ ಜಿಲ್ಲೆಯಲ್ಲಿ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಂದ 1693 ಮತಗಟ್ಟೆಗಳು, 1693 ಮತಗಟ್ಟೆ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು 168 ಮೇಲ್ವಿಚಾರಕರಿದ್ದಾರೆ. ಕರಡು ಮತದಾರರ ಪಟ್ಟಿಯನ್ವಯ 743476 ಪುರುಷ, 751161 ಮಹಿಳಾ, 116 ಇತರೆ ಸೇರಿ 1494753 ಮತದಾರರಿದ್ದಾರೆ.

ಮತದಾರರ ಹೊಸದಾಗಿ ಸೇರ್ಪಡೆಗೆ ನಮೂನೆ–6, ವಿದೇಶಗಳಲ್ಲಿ ನೆಲೆಸಿರುವ ಭಾರತೀಯ ನಾಗರೀಕರು ನಮೂನೆ–6ಎ, ಮತದಾರರ ಗುರುತಿನ ಚೀಟಿಗೆ ಆಧಾರ್ ಜೋಡಣೆ, ಇತರೆ 11 ದಾಖಲೆಗಳ ಜೋಡಣೆಗೆ ನಮೂನೆ–6ಬಿ, ಹೆಸರು ತೆಗೆದು ಹಾಕಲು ನಮೂನೆ–7, ತಿದ್ದುಪಡಿ ಸ್ಥಳಾಂತರ ಮಾಡಲು ನಮೂನೆ–8 ರಲ್ಲಿ ಸಲ್ಲಿಸಬೇಕು. ಅರ್ಜಿಗಳನ್ನು ಆನ್‌ಲೈನ್‌ನಲ್ಲಿಯು ಸಲ್ಲಿಸಬಹುದಾಗಿದ್ದು www.nsvp.in ಹಾಗೂ ವೋಟರ್ ಹೆಲ್ಪ್ ಲೈನ್ ಆಪ್ ಹಾಗೂ ceo.karnataka.gov.in ವೆಬ್‌ಸೈಟ್ ಮೂಲಕ ಸಲ್ಲಿಸಬಹುದಾಗಿದೆ ಎಂದರು.

ಈ ವೇಳೆ ಚುನಾವಣಾ ತಹಶೀಲ್ದಾರ್ ಕವಿರಾಜ್ ಹಾಗೂ ವಿವಿಧ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.

---

### ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಲು ಮನವಿ

» **ದಾವಣಗೆರೆ**

ದೀಪಾವಳಿ ಹಬ್ಬವನ್ನು ಜಿಲ್ಲೆಯಾದ್ಯಂತ ಅಕ್ಟೋಬರ್ 31 ಮತ್ತು 2 ರಂದು ಸಡಗರದಿಂದ ಆಚರಿಸಲಾಗುತ್ತಿದ್ದು, ಹಬ್ಬದ ಸಂದರ್ಭದಲ್ಲಿ ಸಿಡಿಸುವ ಪಟಾಕಿಗಳು ಶಬ್ದ ಮಾಲಿನ್ಯ ಮತ್ತು ವಾಯು ಮಾಲಿನ್ಯ ಉಂಟು ಮಾಡಿ ಪರಿಸರಕ್ಕೆ ಹಾನಿ ಮಾಡುತ್ತಿದೆ. ಜೊತೆಗೆ ಜನರ ಆರೋಗ್ಯವನ್ನು ಹದಗೆಡಿಸುತ್ತಿದೆ. ಮತ್ತು ಪ್ರಾಣಿ–ಪಕ್ಷಿಗಳ ಕಲರವಕ್ಕೆ ಘಾಸಿ ಉಂಟುಮಾಡುತ್ತಿದೆ. ಆದ್ದರಿಂದ ದೀಪಾವಳಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಸರಳ ರೀತಿಯಲ್ಲಿ ಮಾಲಿನ್ಯ ರಹಿತವಾಗಿ ಮತ್ತು ಭಕ್ತಿ ಪೂರ್ವಕವಾಗಿ ಆಚರಿಸಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮನವಿ ಮಾಡಿದ್ದಾರೆ.

**ಪಟಾಕಿ ಗುರುತಿಸುವಿಕೆ ಕ್ರಮಗಳು:** ಪಟಾಕಿ ಬಾಕ್ಸ್‌ಗಳ ಮೇಲೆ ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್ ಮತ್ತು ನ್ಯಾಷನಲ್ ಎನ್ವಿರಾಂಮೆಂಟಲ್ ಇಂಜಿನಿಯರಿಂಗ್ ರಿಸರ್ಚ್ ಇನ್ಸಿಟ್ಯೂಟ್ ಇವರ ಲೋಗೋ ಹಾಗೂ ನೊಂದಾಯಿತ ಸಂಖ್ಯೆಯೊಂದಿಗೆ ಮುದ್ರಿತವಾಗಿರಬೇಕು. ಅಧೀಕೃತ ಮಾರಾಟಗಾರರು ಸಂಬಂಧಪಟ್ಟ ಇಲಾಖೆ, ಪ್ರಾಧಿಕಾರದಿಂದ ನೀಡುವ ಪರವಾನಗಿಯಲ್ಲಿ ನಿಗದಿಪಡಿಸಿರುವ ದಿನಾಂಕ ಮತ್ತು ಸ್ಥಳಗಳಲ್ಲಿ ಮಾತ್ರ ತಾತ್ಕಾಲಿಕ ಪಟಾಕಿ ಅಂಗಡಿಗಳನ್ನು ಇಡಬೇಕು. ನಿಷೇಧಿತ ಪಟಾಕಿಗಳ ಮಾರಾಟ ಕಂಡುಬಂದಲ್ಲಿ ಅಂತಹ ಪಟಾಕಿಗಳನ್ನು ವಶಪಡಿಸಿಕೊಳ್ಳಲಾಗುವುದು ಮತ್ತು ನಿಯಮಗಳನ್ವಯ ಕಾನೂನು ಕ್ರಮಕೈಗೊಳ್ಳಲಾಗುವುದು. ಹಣತೆ ದೀಪ ಹಚ್ಚುವ ಮೂಲಕ ಬೆಳಕಿನ ಹಬ್ಬ ದೀಪಾವಳಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಅಪಾರ್ಟ್‌ಮೆಂಟ್, ವಠಾರ, ನೆರೆಹೊರೆಯ ಮನೆಯವರು ಒಂದೆಡೆ ಕಲೆತು ಪರಿಸರ ಸ್ನೇಹಿ ದೀಪಾವಳಿ ಹಬ್ಬವನ್ನು ಆಚರಿಸಿ. ಹಬ್ಬದ ಆಚರಣೆಯಲ್ಲಿ ಬೆಳಕೇ ಪ್ರಧಾನವಾಗಿರಲಿ. ಗಿಡ, ಮರಗಳು ಮತ್ತು ಪ್ರಾಣಿ–ಪಕ್ಷಿಗಳಿಗೆ ಯಾವುದೇ ಹಾನಿಯಾದಂತೆ ಎಚ್ಚರವಹಿಸಿ. ಶಾಶ್ವತ ಕುರುಡತನ, ಕಿವುಡುತನಗಳಿಗೆ ಎಡೆಮಾಡಿಕೊಡದಿರಿ. ಪಟಾಕಿಗಳನ್ನು ಖರೀದಿಸುವ ಹಸಿರು ಪಟಾಕಿಗಳ ಲೇಬಲ್‌ಗಳನ್ನು ಪರಿಶೀಲಿಸಿ ಖರೀದಿಸಬೇಕು.125 ಡೆಸಿಬಲ್ ಶಬ್ದಕ್ಕಿಂತಲೂ ಮೇಲ್ಪಟ್ಟ ಪಟಾಕಿಗಳ ಸಿಡಿಸುವುದನ್ನು ನಿಷೇಧಿಸಲಾಗಿದೆ. ಶಿಕ್ಷಣ ಸಂಸ್ಥೆ, ಆಸ್ಪತ್ರೆ ಮತ್ತು ವೃದ್ಧಾಶ್ರಮಗಳಂತಹ ಸೂಕ್ಷ್ಮ ಪ್ರದೇಶಗಳ ಹತ್ತಿರ ಪಟಾಕಿ ಸಿಡಿಸುವುದನ್ನು ನಿಷೇಧಿಸಲಾಗಿದೆ. ಪಟಾಕಿಗಳ ಸಿಡಿತದ ನಂತರ ಉತ್ಪತ್ತಿಯಾಗುವ ಘನ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯಬಾರದು. ಹಸಿರು ಪಟಾಕಿಯನ್ನು ಹೊರತುಪಡಿಸಿ ಇನ್ಯಾವುದೇ ಪಟಾಕಿಗಳನ್ನು ಹಬ್ಬದ ಸಮಯದಲ್ಲಿ ರಾತ್ರಿ 8.00 ಗಂಟೆಯಿಂದ 10.00 ವರೆಗೆ ಮಾತ್ರ ಪಟಾಕಿಗಳನ್ನು ಸ್ಫೋಟಿಸಲು ಅವಕಾಶ ನೀಡಿದ್ದು, ಉಳಿದ ಸಮಯದಲ್ಲಿ ಪಟಾಕಿಗಳ ಸ್ಫೋಟವನ್ನು ನಿಷೇಧಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

# ತಾಲ್ಲೂಕಿನ ಐದು ಗ್ರಾಮ ತಂಬಾಕು ಮುಕ್ತ ಮಾಡುವ ಗುರಿ

» **ಚಳ್ಳಕೆರೆ**

ಜಿಲ್ಲೆಯಾದ್ಯಂತ ತಂಬಾಕು ನಿಯಂತ್ರಣ ಪ್ರಾಧಿಕಾರದಿಂದ ತಂಬಾಕು ವಸ್ತುಗಳ ಸೇವನೆ ಮತ್ತು ಮಾರಾಟವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಹಲವಾರು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿದೆ. ವಿಶೇಷವಾಗಿ ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಸ್ಟಾಪ್ ಟೋಬೊಕೋ ಯಾಪ್‌ನಲ್ಲಿ ದೂರು ನೀಡಿದರೆ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾ ಕೋಆರ್ಡಿನೇಟರ್ ಪ್ರಭುದೇವ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಂಬಾಕು ವಸ್ತುಗಳ ನಿಯಂತ್ರಣ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಪ್ರತಿತಾಲ್ಲೂಕಿನಿಂದ ಕನಿಷ್ಠಪಕ್ಷ ಐದು ಗ್ರಾಮಗಳನ್ನು ತಂಬಾಕು ಮುಕ್ತಗ್ರಾಮವಾಗಿ ಪರಿವರ್ತನೆ ಮಾಡುವ ಗುರಿಯನ್ನು ಹೊಂದಿದೆ. ಜಿಲ್ಲೆಯಾದ್ಯಂತ ಈಗಾಗಲೇ



120 ಪ್ರಕರಣ ದಾಖಲಿಸಿ 18100 ದಂಡವನ್ನು ವಸೂಲಿ ಮಾಡಿದೆ. ಚಳ್ಳಕೆರೆಯ ಸಾರ್ವಜನಿಕ ಆಸ್ಪತ್ರೆ, ನಾಯಕನಹಟ್ಟಿ ಮತ್ತು ಪರಶುರಾಮಪುರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಧೂಮಪಾನ ತ್ಯಜಿಸುವವರಿಗೆ ಮಾರ್ಗದರ್ಶನ ಶಿಬಿರವನ್ನು ನಡೆಸಲಾಗುತ್ತಿದೆ ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ ಮಾತನಾಡಿ, ಆರೋಗ್ಯ ಇಲಾಖೆ ಮುಂಜಾಗ್ರತಾ ಕ್ರಮವಾಗಿ ಹಲವಾರು ರೋಗಗಳನ್ನು ನಿಯಂತ್ರಿಸುವಲ್ಲದೆ, ಕುಷ್ಠ, ಕ್ಷಯ ಮುಂತಾದ ರೋಗಗಳಿಗೆ ತುತ್ತಾದವರಿಗೆ ಸೂಕ್ತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಈಗಾಗಲೇ ತಾಲ್ಲೂಕಿನಾದ್ಯಂತ ಕುಷ್ಠರೋಗ ನಿಯಂತ್ರಿಸಲು 327 ಜನರ ತಂಡವನ್ನು ರಚಿಸಿದೆ, ತಾಲ್ಲೂಕು ಮೇಲ್ವಿಚಾರಕರು, ನೋಡಲ್ ಅಧಿಕಾರಿಗಳ ಸಹಯೋಗದಲ್ಲಿ ಕುಷ್ಠರೋಗ ನಿಯಂತ್ರಣಕ್ಕೆ ಪ್ರಾಮಾಣಿಕ ಪ್ರಯತ್ನ ನಡೆದಿದೆ. ತಾಲ್ಲೂಕಿನ ನೇರಲಗುಂಟೆ, ಟಿ.ಎನ್. ಕೋಟೆ, ಬುಡ್ನಹಟ್ಟಿ, ದೇವರೆಡ್ಡಿಹಳ್ಳಿ, ಚಳ್ಳಕೆರೆ ಕುಷ್ಠರೋಗ ಪ್ರಕರಣಗಳು ವರದಿಯಾಗಿವೆ. 11 ಪ್ರಕರಣ ಪತ್ತೆಹಚ್ಚಿ ಚಿಕಿತ್ಸೆ ನೀಡಲಾಗುತ್ತಿದೆ, ಕ್ಷಯರೋಗ ಕುರಿತಂತೆ ಗ್ರಾಮೀಣ ಭಾಗಗಳಲ್ಲಿ ಅಂಗನವಾಡಿ, ಆಶಾ ಕಾರ್ಯಕರ್ತೆಯರ ಸೇವೆಯಿಂದಲೂ ವಿಶೇಷ ತಪಾಸಣಾ ಶಿಬಿರವನ್ನು ಸಹ ಹಮ್ಮಿಕೊಂಡಿದೆ. 300ಕ್ಕೂ ಹೆಚ್ಚು ಕ್ಷಯರೋಗ ಪ್ರಕರಣ ಪತ್ತೆಹಚ್ಚಿ ಚಿಕಿತ್ಸೆ ನೀಡಿದೆ ಎಂದರು. ತಹಶೀಲ್ದಾರ್ ರೇಹಾನ್‌ಪಾಷ ಮಾತನಾಡಿ, ಆರೋಗ್ಯ ಇಲಾಖೆ ವಿವಿಧ ರೀತಿಯ ರೋಗಗಳ ನಿಯಂತ್ರಣಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ರೋಗ ಬಂದವರಿಗೆ ಚಿಕಿತ್ಸೆ ನೀಡುವುದು ಎಷ್ಟು ಮುಖ್ಯವೋ, ರೋಗವನ್ನು ನಿಯಂತ್ರಿಸುವುದು ಅಷ್ಟೇ ಮುಖ್ಯವಾಗಿದೆ. ಆರೋಗ್ಯ ಇಲಾಖೆ ಜಾಗೃತಿ ಕಾರ್ಯಕ್ರಮಗಳಿಗೆ ತಾಲ್ಲೂಕು ಮಟ್ಟ ಅಧಿಕಾರಿಗಳನ್ನು ಸಹ ಭಾಗವಹಿಸಿ ಮಾರ್ಗದರ್ಶನ ನೀಡುವಂತೆ ಸೂಚನೆ ನೀಡಲಾಗುವುದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಸಿಡಿಪಿಓ ಹರಿಪ್ರಸಾದ್, ಸಮಾಜ ಕಲ್ಯಾಣಾಧಿಕಾರಿ ದೇವ್ಲಾನಾಯಕ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಕುಡಿಯುವ ನೀರು ಸರಬರಾಜು ಅಧಿಕಾರಿ ದಯಾನಂದಸ್ವಾಮಿ, ಡಾ.ಅಂಬಿಕಾ, ಡಾ.ಸಂದೀಪ್ ಮುಂತಾದವರು ಇದ್ದರು.


**Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T**